ಸಂಪುಟ : 10 ಸಂಚಿಕೆ: 295 ಪುಟ : 4+2 ಬೆಲೆ: 3.00 ಗುರುವಾರ ಜನವರಿ 08 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 295 Pages : 4+2 Price : 3.00 Thursday January 08 2026 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25




## ರಸ್ತೆ ಕಾಮಗಾರಿಗಳಿಗೆ ಭೂಮಿಪೂಜೆ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವಾರ್ಡ್ ನಂ. 34ರ ವಿವಿಧ ಭಾಗಗಳಲ್ಲಿ ರಸ್ತೆ ನಿರ್ಮಾಣದ ಭೂಮಿಪೂಜಾ ಕಾರ್ಯಕ್ರಮವನ್ನು ಮಾಜಿ ಮುಖ್ಯಮಂತ್ರಿ, ಹಾವೇರಿ–ಗದಗ ಸಂಸದರಾದ ಬಸವರಾಜ ಬೊಮ್ಮಾಯಿಯವರು ನರಗುಂದ ಶಾಸಕ ಸಿ.ಸಿ. ಪಾಟೀಲ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ವಾರ್ಡಿನ ನಗರಸಭಾ ಸದಸ್ಯರಾದ ವಿದ್ಯಾವತಿ ಅಮರನಾಥ ಗಡಗಿ ಸಮ್ಮುಖದಲ್ಲಿ ನೆರವೇರಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ವಾರ್ಡಿನ ಹಿರಿಯರಾದ ಅಮರನಾಥ ಗಡಗಿ, ಎಲ್.ಟಿ. ರಾಜೋಳ್ಳಿ, ತೋಟೊಸಾ ಭಾಂಡಗೆ, ಪ್ರಲ್ಹಾದ ಇನಾಮದಾರ್, ಎಂ.ಎಸ್. ಕರೀಗೌಡ್ರ, ಮೋಹನ ಮಾಳಶೆಟ್ಟಿ, ವಿಜಯಕುಮಾರ ಗಡ್ಡಿ, ಶ್ರೀಪತಿ ಉಡುಪಿ, ಸಿದ್ದು ಪಲ್ಲೇದ, ಎಂ.ಎಂ. ಹಿರೇಮಠ, ಜಗನ್ನಾಥಸಾ ಭಾಂಡಗೆ, ಈಶಣ್ಣ ಮುನವಳ್ಳಿ, ಶ್ರೀಕಾಂತ ಖಟವಟೆ, ಸಂಗಮೇಶ ದುಂದೂರ, ಬಿ.ಎಚ್. ಲದ್ವಾ, ಲಿಂಗರಾಜ ಪಾಟೀಲ, ಮಂಜುನಾಥ ಶಾಂತಗೇರಿ, ಕೃಷ್ಣಾ ಜಾಧವ, ಕಿರಣ ಗೊಲ್ಲರ, ಸುರೇಶ ಮರಳಪ್ಪನವರ, ಶಂಕರ ಕಾಕಿ ಸೇರಿದಂತೆ ವಾರ್ಡಿನ ಗುರು–ಹಿರಿಯರು, ಗದಗ–ಬೆಟಗೇರಿ ನಗರಸಭಾ ಸದಸ್ಯರು, ಅಧಿಕಾರಿಗಳು, ಪಕ್ಷದ ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

### ನನ್ನ ಆಡಳಿತ ತೃಪ್ತಿ ತಂದಿದೆ; ಮುಖ್ಯಮಂತ್ರಿ ಸಿದ್ದರಾಮಯ್ಯ

# ಜನರ ಆಶೀರ್ವಾದ ಇರುವವರೆಗೆ ರಾಜಕೀಯದಲ್ಲಿರುವೆ

**■ವಿಜಯಸಾಕ್ಷಿ ಸುದ್ದಿ, ಹಾವೇರಿ**

ರಾಜಕಾರಣದಲ್ಲಿ ಇರಬೇಕಾದರೆ ಜನರ ಆಶೀರ್ವಾದ ಇರಬೇಕು. ಅವರ ಆಶೀರ್ವಾದದಿಂದ ಇಲ್ಲಿಯವರೆಗೂ ಸಾಗಿ ಬಂದಿದ್ದು, ಜನರ ಆಶೀರ್ವಾದ ಇರುವವರೆಗೆ ರಾಜಕೀಯದಲ್ಲಿರುತ್ತೇನೆ. ನನ್ನ ಆಡಳಿತ ತೃಪ್ತಿ ತಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಬುಧವಾರ ಹಾವೇರಿಯ ಕೊಳ್ಳಿ ಪಾಲಿಟೆಕ್ನಿಕ್ ಆವರಣದ ಹೆಲಿಪ್ಯಾಡ್‌ನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಹಾವೇರಿ ವೈದ್ಯಕೀಯ ಕಾಲೇಜು ಪೂರ್ಣಗೊಂಡಿದ್ದು, ಇದಕ್ಕೆ ಸುಮಾರು 500 ಕೋಟಿ ರೂ ವೆಚ್ಚವಾಗಿದೆ. ಇದನ್ನು ನಾನೇ ಘೋಷಣೆ ಮಾಡಿದ್ದೆ ಹಾಗೂ ಉದ್ಘಾಟನೆಯನ್ನೂ ನಾನೇ



ಮಾಡುತ್ತಿದ್ದೇನೆ. ಈಗಾಗಲೇ ಮೂರನೇ ಬ್ಯಾಚ್ ನಡೆಯುತ್ತಿದೆ ಎಂದರು.

ಸಿದ್ದರಾಮಯ್ಯ ಅವರ ಸರ್ಕಾರ ಬೊಕ್ಕಸ ಖಾಲಿ ಮಾಡಿದೆ ಎಂದು ಬಿಜೆಪಿಯವರು ಮಾಡಿರುವ ಟೀಕೆಗಳಿಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು, ಬಿಜೆಪಿಯವರು ಸುಳ್ಳು ಹೇಳುವುದರಲ್ಲಿ ನಿಸ್ಸೀಮರು ಎಂದರು.

ಕೇಂದ್ರ ಸರ್ಕಾರವೇ ಜಿಎಸ್.ಟಿ ಜಾರಿಗೊಳಿಸಿದ ಎಂಟು ವರ್ಷ ಶೇ. 24 ತೆರಿಗೆ ಸುಲಿಗೆ ಮಾಡಿ ನಂತರ ನಾವು ತೆರಿಗೆ ಕಡಿಮೆ ಮಾಡಿದ್ದೇವೆ ಎಂದರು. ಕರ್ನಾಟಕ ರಾಜ್ಯವೊಂದಕ್ಕೆ ಒಂದು ವರ್ಷಕ್ಕೆ 10–12 ಸಾವಿರ ಕೋಟಿ ರೂ ಕಡಿಮೆಯಾಗಿದೆ. ಈ ವರ್ಷ 5–6 ಸಾವಿರ ಕೋಟಿ ನಷ್ಟವಾಗುತ್ತದೆ. ಇದಕ್ಕೆಲ್ಲ ಯಾರು ಹೊಣೆ? ಒಂದು ರೂ ಕೊಟ್ಟರೆ 14 ಪೈಸೆ ವಾಪಸ್ಸು ಬರುತ್ತದೆ. ಭದ್ರಾ ಮೇಲ್ದಂಡೆ ಯೋಜನೆಗೆ 5300 ಕೋಟಿ ಕೊಡಲಿಲ್ಲ. 5495 ಕೋಟಿ ರಾಜ್ಯಕ್ಕೆ ಒದಗಿಸಲು 15ನೇ ಹಣಕಾಸು ಆಯೋಗ ಶಿಫಾರಸು ಮಾಡಿತ್ತು. ಅದನ್ನೂ ಕೊಡಲಿಲ್ಲ. ಪೆರಿಫೆರಲ್ ರಿಂಗ್ ರೋಡ್‌ಗೆ 3000 ಕೋಟಿ, ಬೆಂಗಳೂರಿನ ಕೆರೆಯ ಅಭಿವೃದ್ಧಿಗೆ 3000 ಕೋಟಿ ಕೊಡಲಿಲ್ಲ. ಬಿಜೆಪಿ ನಾಲ್ಕು ವರ್ಷ ಅಧಿಕಾರದಲ್ಲಿದ್ದರೂ ವೈದ್ಯಕೀಯ ಕಾಲೇಜನ್ನು ಏಕೆ ಪೂರ್ಣಗೊಳಿಸಲಿಲ್ಲ? ಇದನ್ನು ನಾವು ಅಧಿಕಾರಕ್ಕೆ ಬಂದು ಪೂರ್ಣಗೊಳಿಸಿದ್ದೇವೆ ಎಂದರು.

ಹುಬ್ಬಳ್ಳಿಯಲ್ಲಿ ಮಹಿಳೆಯ ವಿವಸ್ತ್ರಗೊಳಿಸಿರುವ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು, ಸುಜಾತ ಹಂಡೆ ಎಂಬ ಮಹಿಳೆಯನ್ನು ಪೊಲೀಸರು ಬಂಧಿಸಲು ಹೋಗಿದ್ದ ಸಂದರ್ಭದಲ್ಲಿ ಮಹಿಳೆಯೇ ಸ್ವತಃ ವಿವಸ್ತ್ರಗೊಂಡು ಮಹಿಳಾ ಪೊಲೀಸರನ್ನು ಕಚ್ಚಿದ್ದಾರೆ. ಆಕೆಯ ಮೇಲೆ ಎಫ್‌ಐಆರ್ ದಾಖಲಾಗಿದ್ದು, ಪೊಲೀಸರು ವಿಚಾರಣೆಗೆ ಹೋಗಿದ್ದ ಸಂದರ್ಭದಲ್ಲಿ ಅವರನ್ನೇ ಕಚ್ಚಿದ್ದಾರೆ. ಹತ್ತಕ್ಕೂ ಹೆಚ್ಚು ಮಹಿಳಾ ಪೊಲೀಸರಿದ್ದರು. ಕಾನೂನನ್ನು ಯಾರೂ ಕೈಗೆ ತೆಗೆದುಕೊಳ್ಳಬಾರದು. ಹಾಗೆ ಮಾಡಿದವರ ಮೇಲೆ ಕಾನೂನಿನ ರೀತಿಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಅನ್ನಭಾಗ್ಯ ಯೋಜನೆಯನ್ನು ಅನೇಕರು ವ್ಯಾಪಾರ ಮಾಡಿಕೊಂಡಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು, ಯೋಜನೆಯಡಿ 5 ಕೆ.ಜಿ ಅಕ್ಕಿಯ ಜೊತೆಗೆ ಬೇರೆ ಪದಾರ್ಥಗಳನ್ನು ಕೊಡಲು ತೀರ್ಮಾನಿಸಲಾಗಿದೆ ಎಂದರು.

> ಬಳ್ಳಾರಿ ಪ್ರಕರಣವನ್ನು ಸಿಬಿಐಗೆ ಹಸ್ತಾಂತರ ಮಾಡಬೇಕೆಂದು ಜನಾರ್ದನ ರೆಡ್ಡಿ, ಶ್ರೀರಾಮುಲು ಸೇರಿದಂತೆ ಅನೇಕರು ಒತ್ತಾಯಿಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿಗಳು, ನಿನ್ನೆ ಕೆಪಿಸಿಸಿ ಅಧ್ಯಕ್ಷರಾದ ಡಿ.ಕೆ. ಶಿವಕುಮಾರ್ ಅವರು ಭೇಟಿ ನೀಡಿ ಮಾತನಾಡಿದ್ದಾರೆ. ಬಳ್ಳಾರಿಯಲ್ಲಿ ಗಲಾಟೆಯಾಗಿ ಒಬ್ಬ ವ್ಯಕ್ತಿ ಸಾಯಲು ಬ್ಯಾನರ್‌ನ್ನು ಬಿಚ್ಚಿಹಾಕಿದ್ದು ಪ್ರಚೋದನೆ. ಬಿಜೆಪಿಯವರಿಗೆ ಅಸೂಯೆ ತಡೆಯಲು ಆಗುತ್ತಿಲ್ಲ ಎಂದರು.

### ಮಕ್ಕಳೊಂದಿಗೆ ಸಂವಾದ, ಅಹವಾಲು ಸ್ವೀಕಾರ ಸಮಾರಂಭದಲ್ಲಿ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ

# ಶಾಲೆ ಬಿಟ್ಟ ಮಕ್ಕಳ ಬಗ್ಗೆ ಗಮನವಿರಲಿ



> ತಾ.ಪಂ ಕಾರ್ಯನಿರ್ವಾಹಣಾಧಿಕಾರಿ ಚಂದ್ರಶೇಖರ ಕಂದಕೂರ ಮಾತನಾಡಿ, ಸರಕಾರಿ ಪ್ರೌಢಶಾಲೆಗಳಲ್ಲಿನ ಮೂಲಭೂತ ಸೌಲಭ್ಯಗಳ ತೊಂದರೆ ನಿವಾರಿಸಲು ಬಿಇಒ ಅವರಿಂದ ಮಾಹಿತಿ ಪಡೆದು ಕ್ರಮ ಜರುಗಿಸಲಾಗುವುದು. ಮನೆಗೊಂದು ಶೌಚಾಲಯ ಇರುವಂತೆ, ಶೌಚಾಲಯ ಇರುವ ಮನೆಯ ವರನನ್ನೇ ನೀವು ಮದುವೆಯಾಗಬೇಕೆಂದು ಬಾಲಿಕೆಯರಿಗೆ ಸಲಹೆ ನೀಡಿದರಲ್ಲದೆ, ಮನೆಯಲ್ಲಿ ಪಾಲಕರು ಗಂಡು–ಹೆಣ್ಣು ಮಕ್ಕಳನ್ನು ಒಂದೇ ರೀತಿ ಬೆಳೆಸಬೇಕೆಂದರು.

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಕ್ಕಳು ನಿಯಮಿತವಾಗಿ ಶಾಲೆಗೆ ಬರುವುದನ್ನು ರೂಢಿಸಬೇಕು. ಶಾಲೆ ಬಿಟ್ಟ ಮಕ್ಕಳ ಬಗ್ಗೆ ಎಲ್ಲರೂ ನಿಗಾ ವಹಿಸಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ ಹೇಳಿದರು.

ಪಟ್ಟಣದ ಸರಕಾರಿ ಪ್ರೌಢಶಾಲೆಯಲ್ಲಿ ಬುಧವಾರ ನಡೆದ ಮಕ್ಕಳೊಂದಿಗೆ ಸಂವಾದ ಮತ್ತು ಅಹವಾಲು ಸ್ವೀಕಾರ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

6ರಿಂದ 14 ವರ್ಷದೊಳಗಿನ ಯಾವುದೇ ಮಕ್ಕಳು ಶಿಕ್ಷಣ ವಂಚಿತರಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಎಲ್ಲರ ಮೇಲಿದೆ. ಅದರಲ್ಲೂ ತಾಲೂಕಾ ಮಟ್ಟದ ಅಧಿಕಾರಿಗಳು ಈ ಬಗ್ಗೆ ವಿಶೇಷ ಗಮನ ನೀಡಬೇಕು. ಶಾಲೆ ಬಿಟ್ಟ ಮಕ್ಕಳ ಹಾಜರಾತಿ ಹಾಕುತ್ತ ನಡೆದರೆ ವರ್ಗ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರೇ ಹೊಣೆಯಾಗುತ್ತಾರೆ. ಭಾರತ ದೇಶದಲ್ಲಿ ಬಾಲ್ಯ ವಿವಾಹಗಳಿಲ್ಲದಂತೆ ಮಾಡುವುದಕ್ಕಾಗಿ ಈ ಅರಿವು ಜಾಗೃತಿಯನ್ನು ಹಮ್ಮಿಕೊಳ್ಳಲಾಗಿದೆ. ಶಾಲೆಗಳಲ್ಲಿ ಮಕ್ಕಳು ತಮ್ಮ ಅನಿಸಿಕೆಗಳನ್ನು ಹೇಳಿಕೊಳ್ಳಲು ಕಡ್ಡಾಯವಾಗಿ ಸಲಹಾ ಪೆಟ್ಟಿಗೆಯನ್ನು ಇಡಬೇಕೆಂದರು.

ವಸತಿ ನಿಲಯಗಳಲ್ಲಿ, ಅದರಲ್ಲೂ ಬಾಲಿಕೆಯರ ವಸತಿ ನಿಲಯಗಳಲ್ಲಿ ರಕ್ಷಣಾ ನೀತಿಯನ್ನು ಕಡ್ಡಾಯವಾಗಿ ಅಳವಡಿಸಿಕೊಂಡು ಜಾರಿಗೆ ತರಬೇಕು. ಏನಾದರೂ ಅಹಿತಕರ ಘಟನೆ ನಡೆದರೆ ಅಲ್ಲಿನ ಮೇಲ್ವಿಚಾರಕರೇ ಜವಾಬ್ದಾರರಾಗುತ್ತಾರೆ ಎಂದರು.

ತಹಸೀಲ್ದಾರ ಕಿರಣಕುಮಾರ ಕುಲಕರ್ಣಿ ಮಾತನಾಡಿ, ಮಕ್ಕಳ ಆಯೋಗವು ಮಕ್ಕಳ ಹಿತದೃಷ್ಟಿಯಿಂದ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ. ನಿಮಗೆ ಏನೇ ತೊಂದರೆಯಾದರೂ ಅವರ ಗಮನಕ್ಕೆ ತನ್ನಿ. ಇಲ್ಲವಾದರೆ ತಾಲೂಕಾಡಳಿತದ ಗಮನಕ್ಕೂ ತರಬಹುದು ಎಂದರು.

ಕಾರ್ಯಕ್ರಮದಲ್ಲಿ ತಾಲೂಕಾ ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಮಕ್ಕಳ ಕಲ್ಯಾಣ ಸಮಿತಿ ಸದಸ್ಯೆ ಸುಪರ್ಣಾ ಬ್ಯಾಹಟ್ಟಿ ವೇದಿಕೆಯ ಮೇಲಿದ್ದರು. ಮುಖ್ಯ ಶಿಕ್ಷಕ ಎಸ್.ಬಿ. ನಿಡಗುಂದಿ ಸ್ವಾಗತಿಸಿದರು. ದೈಹಿಕ ಶಿಕ್ಷಕ ಆರ್.ಎಸ್. ನರೇಗಲ್ಲ ಪ್ರಮಾಣ ವಚನ ಬೋಧಿಸಿದರು. ಶಿಕ್ಷಕ ಡಿ.ಎಸ್. ಬಡಿಗೇರ ನಿರೂಪಿಸಿದರೆ, ಶಿಕ್ಷಕ ಬಿ.ಟಿ. ತಾಳಿ ವಂದಿಸಿದರು.

## ಮಕ್ಕಳನ್ನು ಅಂಗನವಾಡಿ ಕೇಂದ್ರಗಳಿಗೆ ಕಳಿಸಿ




**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಅಂಗನವಾಡಿಗಳು ಮಗುವಿನ ಶಿಕ್ಷಣದ ಮೊದಲ ಮೆಟ್ಟಿಲುಗಳಾಗಿದ್ದು, ಶಿಕ್ಷಣದ ಜೊತೆಗೆ ಆರೋಗ್ಯ ಸೇವೆ ನೀಡುವ ಮೈಲಿಗಲ್ಲುಗಳಾಗಿವೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಸಮೀಪದ ಗೊಜನೂರು ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಅಂಗನವಾಡಿ ಕೇಂದ್ರ ಸಂಖ್ಯೆ–43ರ ಕಟ್ಟಡವನ್ನು ಬುಧವಾರ ಉದ್ಘಾಟಿಸಿ ಮಾತನಾಡಿದರು.

ಬಾಲ್ಯದಿಂದಲೇ ಮಕ್ಕಳಿಗೆ ಉತ್ತಮ ಶಿಕ್ಷಣ ದೊರೆಯಬೇಕೆನ್ನುವದು ಪಾಲಕರ ಇಚ್ಛೆಯಾಗಿರುತ್ತದೆ. ಅದಕ್ಕಾಗಿ ಸರಕಾರ ಅಂಗನವಾಡಿ ಕೇಂದ್ರಗಳನ್ನು ಎಲ್ಲ ಕಡೆಗಳಲ್ಲಿ ಸ್ಥಾಪಿಸಿದ್ದು, ಸಾವಿರಾರು ಮಕ್ಕಳು ಇದರಲ್ಲಿ ಕಲಿಯುತ್ತಿದ್ದಾರೆ. ಇಲ್ಲಿ ಊಟ, ಉಪಹಾರ ಉಚಿತವಾಗಿ ನೀಡುವದರ ಜೊತೆಗೆ ಸಾಮಾನ್ಯವಾಗಿ ಮುಂದೆ ಅವರ ಶಿಕ್ಷಣಕ್ಕೆ ಅನೂಕೂಲವಾಗುವ ವಿದ್ಯೆಯನ್ನು ನೀಡಲಾಗುತ್ತದೆ. ಮಕ್ಕಳ ಶ್ರೆಯೋಭಿವೃದ್ಧಿಗಾಗಿ ಅಂಗನವಾಡಿ ಶಿಕ್ಷಕಿಯರು, ಸಹಾಯಕರು ನಿರಂತರ ಸೇವೆ ಸಲ್ಲಿಸುತ್ತಿದ್ದು, ಮಕ್ಕಳ ಆರೋಗ್ಯ, ಉತ್ತಮ ಆಹಾರ ಒದಗಿಸುವತ್ತ ಅಂಗನವಾಡಿ ಶಿಕ್ಷಕರು, ಸಹಾಯಕರು ವಿಶೇಷ ಆದ್ಯತೆ ನೀಡಬೇಕು. ▸▸3ನೇ ಪುಟಕ್ಕೆ

### ಐಐ.ಓದಲ್ಲಿ ಗೋಲ್ಡ್ ಮೆಡಲ್‌ನೊಂದಿಗೆ ರಾಜ್ಯಕ್ಕೆ ಮೊದಲ ರ್‍ಯಾಂಕ್ ಪಡೆದ ಸಹನಾ ಅನಂತ ಕಾರ್ಕಳ

# ಸಹನಾ ಕಾರ್ಕಳರದ್ದು ದಾಖಲೆಯ ಸಾಧನೆ




> ಸಹನಾ ಅನಂತ ಕಾರ್ಕಳ ರಾಜ್ಯ ಸರಕಾರಿ ನೌಕರರ ಸಂಘದಿಂದ ಸನ್ಮಾನ ಸ್ವೀಕರಿಸಿ ಮಾತನಾಡಿ, ಇಷ್ಟಪಟ್ಟು ಕಲಿತರೆ ಯಾವುದೂ ಕಷ್ಟವಾಗಲಾರದು. ಸಾಧನೆ ಯಾರ ಸ್ವತ್ತಲ್ಲ. ಸಾಧಿಸುವ ಛಲ ಇರಬೇಕೆಂದರಲ್ಲದೆ, ಪ್ರತಿಭೆಗಳನ್ನು ಹುಡುಕಿ ಪ್ರೋತ್ಸಾಹಿಸುವ ಕೆಲಸವಾಗಬೇಕಿದೆ. ತಮ್ಮ ಸಾಧನೆಯನ್ನು ಗುರುತಿಸಿದ ರಾಜ್ಯ ಸರಕಾರಿ ನೌಕರರ ಸಂಘ ತಮಗೆ ಸನ್ಮಾನಿಸಿ ಗೌರವಿಸಿದ್ದಕ್ಕೆ ನಾನು ಋಣಿಯಾಗಿದ್ದೇನೆ ಎಂದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಐಐ.ಓ ಸ್ನಾತಕೋತ್ತರ ಪದವಿಯಲ್ಲಿ ಗೋಲ್ಡ್ ಮೆಡಲ್‌ನೊಂದಿಗೆ ರಾಜ್ಯ–ಕ್ಕೆ ಮೊದಲ ರ್‍ಯಾಂಕ್ ಪಡೆದು ಗದುಗಿನ ಶಿಕ್ಷಣ ಕ್ಷೇತ್ರದ ಗರಿಮೆಯನ್ನು ಹೆಚ್ಚಿಸಿರುವ ಸಹನಾ ಅನಂತ ಕಾರ್ಕಳವರ ದಾಖಲೆಯ ಸಾಧನೆ ನಮಗೆಲ್ಲ ಹೆಮ್ಮೆ ತಂದಿದೆ ಎಂದು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಪ್ರಶಂಸೆ ವ್ಯಕ್ತಪಡಿಸಿದರು.

ಐಐ.ಓದಲ್ಲಿ ಗೋಲ್ಡ್ ಮೆಡಲ್‌ನೊಂದಿಗೆ ರಾಜ್ಯಕ್ಕೆ ಮೊದಲ ರ್‍ಯಾಂಕ್ ಪಡೆದಿರುವ ಸಹನಾ ಅನಂತ ಕಾರ್ಕಳ ಅವರನ್ನು ರಾಜ್ಯ ಸರಕಾರಿ ನೌಕರರ ಸಂಘದ ಪರವಾಗಿ ಸಂಘದ ಕಛೇರಿಯಲ್ಲಿ ಸನ್ಮಾನಿಸಿ ಅವರು ಮಾತನಾಡಿದರು.

ರಾಜ್ಯ ಸರಕಾರಿ ನೌಕರರ ಸಂಘದ ನಿಕಟಪೂರ್ವ ಉಪಾಧ್ಯಕ್ಷ ಡಾ. ರವಿ ಎಲ್. ಗುಂಜೀಕರ ಮಾತನಾಡಿ, ಸಹನಾ ಅನಂತ ಕಾರ್ಕಳ ಕಾನೂನು ಪದವೀಧರ ಕಲಿಕಾರ್ಥಿಗಳಿಗೆ ಮಾದರಿಯಾಗಿದ್ದಾರೆ ಎಂದರು.

ವೇದಿಕೆಯ ಮೇಲಿದ್ದ ಜಿಲ್ಲಾ ನೌಕರರ ಸಂಘದ ಹಿರಿಯ ಉಪಾಧ್ಯಕ್ಷ ಡಿ.ಎಸ್. ದುರ್ಗಣ್ಣವರ, ರಾಜು ಕಂಟೆಗಣ್ಣನವರ, ಹಿರಿಯ ಪತ್ರಕರ್ತ ಜಗದೀಶ ಕುಲಕರ್ಣಿ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ರಾಜು ಹೆಬ್ಬಳ್ಳಿ, ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ, ರಾಜ್ಯ ಕಾರ್ಯಕಾರಿಣಿ ಸದಸ್ಯ ಅರುಣಕುಮಾರ ಹಿರೇಮಠ, ಸಂಘದ ಜಿಲ್ಲಾ ಕಾರ್ಯಕಾರಿಣಿ ಸದಸ್ಯರಾದ ಆನಂದಯ್ಯ ವಿರಕ್ತಮಠ, ನ್ಯಾಯವಾದಿ ಟಿ.ಎನ್. ಭಾಂಡಗೆ, ಪತ್ರಕರ್ತ ಆನಂದ ಸಾಲಿಗ್ರಾಮ, ಹಿರಿಯ ಪತ್ರಕರ್ತ ಅನಂತ ▸▸4ನೇ ಪುಟಕ್ಕೆ

### ಕಾ.ನಿ.ಪದಿಂದ ಹಿರಿಯ ಪತ್ರಕರ್ತ ಅನಂತ ಕಾರ್ಕಳ ಪುತ್ರಿ ಸಹನಾಗೆ ಸನ್ಮಾನ

# ಎಲ್ಲಾ ಪತ್ರಕರ್ತರ ಮಕ್ಕಳೂ ಸಾಧಕರಾಗಬೇಕು



**■ವಿಜಯಸಾಕ್ಷಿ ಸುದ್ದಿ, ಗದಗ**

ಹಿರಿಯ ಪತ್ರಕರ್ತ ಅನಂತ ಕಾರ್ಕಳ ಪುತ್ರಿ ಸಹನಾ ಎಲ್‌ಎಲ್‌ಎಂನಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಗಳಿಸಿ ಗೋಲ್ಡ್ ಮೆಡಲ್ ಪಡೆದ ಹಿನ್ನೆಲೆಯಲ್ಲಿ ಗದಗ ನಗರದ ಪತ್ರಿಕಾ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದಿಂದ ಸನ್ಮಾನ ಸಮಾರಂಭ ಹಮ್ಮಿಕೊಳ್ಳಲಾಗಿತ್ತು.

ಕಾನಿಪ ಗದಗ ಜಿಲ್ಲಾ ಘಟಕದ ಅಧ್ಯಕ್ಷ ರಾಜ್ಯ ಎಂ.ಹೆಬ್ಬಳ್ಳಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಹನಾ ಅವರ ಸಾಧನೆ ಇಡೀ ಪತ್ರಕರ್ತ ಬಳಗಕ್ಕೆ ಸಂತಸ ತಂದಿದೆ. ಸಹನಾ ನಮ್ಮ ಮನೆ ಮಗಳಾಗಿ ಈ ಸಾಧನೆ ಮಾಡಿದ್ದು ನಮಗೆ ಹೆಮ್ಮೆಯ ಸಂಗತಿಯಾಗಿದೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಸಹನಾ ಅನಂತ ಕಾರ್ಕಳ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ಸನ್ಮಾನ ಸ್ವೀಕರಿಸುತ್ತಿರುವುದು ಖುಷಿ ತಂದಿದೆ. ಎಲ್ಲಾ ಪತ್ರಕರ್ತರ ಮಕ್ಕಳೂ ಸಾಧನೆ ಮಾಡಬೇಕು, ಪ್ರತಿ ವರ್ಷ ಸಾಧನೆ ಮಾಡಿದ ಎಲ್ಲರಿಗೂ ಸನ್ಮಾನ ಮಾಡಬೇಕೆಂದರು.

> ಹಿರಿಯ ಪತ್ರಕರ್ತ ಅನಂತ ಕಾರ್ಕಳ ಮಾತನಾಡಿ, ಎಲ್‌ಎಲ್‌ಬಿ ಪಾಸಾಗುವುದೇ ಇಂದಿನ ದಿನದಲ್ಲಿ ಕಷ್ಟಕರವಾಗಿರುವಾಗ, ಎಲ್‌ಎಲ್‌ಎಂನಲ್ಲಿ ನನ್ನ ಮಗಳು ರಾಜ್ಯಕ್ಕೆ ಪ್ರಥಮ ಸ್ಥಾನ ಗಳಿಸಿ ಗೋಲ್ಡ್ ಮೆಡಲ್ ಪಡೆದಿರುವುದು ನಿಜಕ್ಕೂ ಸಾಧನೆಯೇ ಸರಿ. ಇಂತಹ ಸಾಧನೆ ಮಾಡಿದ ಪುತ್ರಿ ಸಹನಾಗೆ ಕಾನಿಪದಿಂದ ಸನ್ಮಾನ ಸಮಾರಂಭ ಹಮ್ಮಿಕೊಂಡಿರುವುದು ನಿಜಕ್ಕೂ ಶ್ಲಾಘನೀಯ. ಪತ್ರಕರ್ತರ ಮಕ್ಕಳನ್ನು ಗುರುತಿಸಿ ಸನ್ಮಾನಿಸುವ ಕಾರ್ಯ ಮಾದರಿಯಾಗಿದೆ ಎಂದರು.

ಹಿರಿಯ ಪತ್ರಕರ್ತ ಜಗದೀಶ ಕುಲಕರ್ಣಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಸಹನಾ ತಾಯಿ ಮಂಗಳಾ ಅನಂತ ಕಾರ್ಕಳ, ನ್ಯಾಯವಾದಿ ಟಿ.ಎನ್. ಭಾಂಡಗೆ, ಹಿರಿಯ ಪತ್ರಕರ್ತರಾದ ಆನಂದ ಸಾಲಿಗ್ರಾಮ, ಹೆಚ್ ಎಂ ಶರೀಫನವರ, ▸▸4ನೇ ಪುಟಕ್ಕೆ

# ಅರ್ಜಿ ಆಹ್ವಾನ

■ **ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ 2024–2025ನೇ innovative project ಅಡಿಯಲ್ಲಿ ಬಾಲ್ಯ ವಿವಾಹ ಮುಕ್ತ ಕರ್ನಾಟಕವನ್ನಾಗಿಸಲು ಬಾಲ್ಯವಿವಾಹಕ್ಕೆ ಸಂಬಂಧಿಸಿದಂತೆ ಶೂನ್ಯ ಸಂಹಿಷ್ಣತೆ ಮುಕ್ತ ಗ್ರಾಮ ಪಂಚಾಯತಗಳನ್ನು ಗುರುತಿಸಿ ಜಿಲ್ಲೆಯಿಂದ ಒಂದು ಗ್ರಾಮ ಪಂಚಾಯತಿ ಆಯ್ಕೆ ಮಾಡಲು ಆಯ್ಕೆ ಸಮಿತಿಯು ಅರ್ಜಿ ಆಹ್ವಾನಿಸಿದೆ. ಅರ್ಜಿ ಸಲ್ಲಿಸುವುದಕ್ಕೆ ದಿ:23–01–2026 ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಚೇರಿಗೆ ಭೇಟಿ ನೀಡಬೇಕೆಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತನ್ನದೇ ವಿದ್ಯಾರ್ಥಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲು ಮನವಿ ಮಾಡಿದ ಜೆಎನ್‌ಯು ಆಡಳಿತ ಮಂಡಳಿ

■ **ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಸೋಮವಾರ ರಾತ್ರಿ ವಿದ್ಯಾರ್ಥಿಗಳ ಗುಂಪೊಂದು ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ಘೋಷಣೆಗಳನ್ನು ಕೂಗಿದ್ದು, ಆ ಘೋಷಣೆಗಳು "ಪ್ರಚೋದನಕಾರಿ, ಪ್ರಚೋದನಕಾರಿ ಮತ್ತು ಗೌರವಾನ್ವಿತ ಸುಪ್ರೀಂ ಕೋರ್ಟ್‌ನ ನೇರ ತಿರಸ್ಕಾರ" ಎಂದು ಕರೆದಿರುವ ಜವಾಹರಲಾಲ್ ನೆಹರು ವಿಶ್ವವಿದ್ಯಾಲಯ (ಜೆಎನ್‌ಯು) ಆಡಳಿತವು ವಿದ್ಯಾರ್ಥಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲು ಕೋರಿದೆ.

"ಉಮರ್ ಖಾಲಿದ್ ಮತ್ತು ಶಾರ್ಜೀಲ್ ಇಮಾಮ್ ಅವರ ಜಾಮೀನು ಅರ್ಜಿಗಳ ಕುರಿತು ನ್ಯಾಯಾಂಗ ತೀರ್ಪಿನ ನಂತರ, ಕಾರ್ಯಕ್ರಮದ ಸಮಯದಲ್ಲಿ, ಸಭೆಯ ಸ್ವರೂಪ ಮತ್ತು ಸ್ವರ ಗಮನಾರ್ಹವಾಗಿ ಬದಲಾಯಿತು. ಕೆಲವು ವಿದ್ಯಾರ್ಥಿಗಳು ಹೆಚ್ಚು ಆಕ್ಷೇಪಾರ್ಹ, ಪ್ರಚೋದನಕಾರಿ ಮತ್ತು ಪ್ರಚೋದನಕಾರಿ ಘೋಷಣೆಗಳನ್ನು ಕೂಗಲು ಪ್ರಾರಂಭಿಸಿದರು. ಇದು ಭಾರತದ ಗೌರವಾನ್ವಿತ ಸುಪ್ರೀಂ ಕೋರ್ಟ್‌ನ ನೇರ ತಿರಸ್ಕಾರವಾಗಿದೆ" ಎಂದು ಜೆಎನ್‌ಯು ಮುಖ್ಯ ಭದ್ರತಾ ಅಧಿಕಾರಿ ನವೀನ್ ಯಾದವ್ ಹೇಳಿದ್ದಾರೆ.

ವಸಂತ್ ಕುಂಜ್ ಪೊಲೀಸ್ ಠಾಣೆಯ ಪೊಲೀಸ್ ಠಾಣಾ ಅಧಿಕಾರಿಗೆ ಬರೆದ ಪತ್ರದಲ್ಲಿ ಯಾದವ್, "ಇಂತಹ ಘೋಷಣೆಗಳನ್ನು ಕೂಗುವುದು ಪ್ರಜಾಸತ್ತಾತ್ಮಕ ಭಿನ್ನಾಭಿಪ್ರಾಯಕ್ಕೆ ಸಂಪೂರ್ಣವಾಗಿ ಹೊಂದಿಕೆಯಾಗುವುದಿಲ್ಲ, ಜೆಎನ್‌ಯು ನೀತಿ ಸಂಹಿತೆಯನ್ನು ಉಲ್ಲಂಘಿಸುತ್ತದೆ ಮತ್ತು ಸಾರ್ವಜನಿಕ ಸುವ್ಯವಸ್ಥೆ, ಕ್ಯಾಂಪಸ್ ಸಾಮರಸ್ಯ ಮತ್ತು ವಿಶ್ವವಿದ್ಯಾಲಯದ ಸುರಕ್ಷತೆ ಮತ್ತು ಭದ್ರತಾ ವಾತಾವರಣವನ್ನು ಗಂಭೀರವಾಗಿ ಕದಡುವ ಸಾಮರ್ಥ್ಯವನ್ನು ಹೊಂದಿದೆ" ಎಂದು ಬರೆದಿದ್ದಾರೆ.

### ಉತ್ತರ ಕರ್ನಾಟಕದ ಜಾನಪದ ಸಾಹಿತ್ಯ ಯಾವ ದಾರಿಗೆ?

# ಜಾನಪದದ ಹೆಸರಿನಲ್ಲಿ ಅಶುದ್ಧತೆ

ಕನ್ನಡ ಸಾಹಿತ್ಯದ ವಿಸ್ತಾರವಾದ ಪರಂಪರೆಯಲ್ಲಿ ಜಾನಪದ ಸಾಹಿತ್ಯಕ್ಕೆ ಇರುವ ಸ್ಥಾನ ಅನನ್ಯ. ಇದು ಪಂಡಿತರಿಂದ ಹುಟ್ಟಿದ ಸಾಹಿತ್ಯವಲ್ಲ. ಹೊಲಗದ್ದೆ, ಗುಡ್ಡಗಳಲ್ಲಿ, ಹಳ್ಳಿ ಹಟ್ಟಿ, ಮಠಮಾನ್ಯಗಳು ಮತ್ತು ಜನಸಾಮಾನ್ಯರ ಬದುಕಿನೊಳಗೆ ಹುಟ್ಟಿದ ಜೀವಂತ ಸಾಹಿತ್ಯ. ವಿಶೇಷವಾಗಿ ಉತ್ತರ ಕರ್ನಾಟಕದ ನೆಲ ಜಾನಪದ ಸಾಹಿತ್ಯದ ತವರೂರೇ ಎನ್ನುವಷ್ಟು ಶ್ರೀಮಂತವಾಗಿದೆ. ಧಾರವಾಡ, ಹಾವೇರಿ, ಗದಗ, ಬಳ್ಳಾರಿ, ವಿಜಯಪುರ, ಬಾಗಲಕೋಟೆ, ಕೊಪ್ಪಳ, ಕಲಬುರಗಿ ಭಾಗಗಳ ಜಾನಪದ ಗೀತೆಗಳು ಕನ್ನಡ ಸಂಸ್ಕೃತಿಗೆ ಅಪಾರ ಕೊಡುಗೆ ನೀಡಿವೆ.



ಜಾನಪದ ಸಾಹಿತ್ಯಕ್ಕೆ ಗ್ರಂಥರೂಪ ಇಲ್ಲ. ಇದಕ್ಕೆ ಜನರೇ ಗ್ರಂಥ. ತಾಯಿ ಮಕ್ಕಳಿಗೆ ಹಾಡುವ ಲಾಲಿ, ರೈತ ಹೊಲದಲ್ಲಿ ಹಾಡುವ ಹಾಡು, ಕುರಿಗಾಹಿ ಗುಡ್ಡದ ಮೇಲೆ ಕೂಗುವ ತಾಳ, ಮದುವೆ–ಜಾತ್ರೆ–ಉತ್ಸವಗಳಲ್ಲಿ ಮೊಳಗುವ ಗೀತೆ ಇವೆಲ್ಲ ಜಾನಪದದ ಜೀವ. ಉತ್ತರ ಕರ್ನಾಟಕದಲ್ಲಿ ಈ ಪರಂಪರೆ ಇನ್ನೂ ಹೆಚ್ಚು ಗಟ್ಟಿಯಾಗಿ ಕಂಡುಬರುತ್ತದೆ. ಇಲ್ಲಿ ಜನರ ಜೀವನ ಕಷ್ಟಕರವಾದರೂ, ಹಾಡಿನಲ್ಲಿ ದು–ಃಖಕ್ಕಿಂತ ಮಾನವೀಯತೆ ಹೆಚ್ಚು ಕಾಣುತ್ತದೆ.

ಬಿಟ್ಟು ಹೊಂಟೆಲ್ಲ ನನ್ನ ಹಳ್ಳಿ ಹುಡುಗಿ,
ಒಣಿಗ್ಯಾವ ಹೂ ಬಳ್ಳಿ....
ಪ್ರೀತಿಯ ಪಾರಿವಾಳ ಹಾರಿ ಹೋತೋ ಗೆಳೆಯ

ಇಂತಹ ಗೀತೆಗಳು ಉತ್ತರ ಕರ್ನಾಟಕದ ಮಣ್ಣಿನ ವಾಸ್ತವ ಹೊತ್ತಿವೆ. ಇಲ್ಲಿ ಪ್ರೀತಿ ಅತಿರೇಕವಲ್ಲ; ಅದು ಸಹಜ, ಮಿತ ಭಾಷೆ ಮತ್ತು ಗೌರವಪೂರ್ಣ. ಹೆಣ್ಣಿನ ಸೌಂದರ್ಯವನ್ನು ವರ್ಣಿಸುವಾಗಲೂ ಸಂಯಮವಿದೆ, ಶೀಲವಿದೆ. ಹಳೆಯ ಜಾನಪದ ಸಾಹಿತ್ಯದ ಶಕ್ತಿ ಅದರ ಸರಳತೆ ಮತ್ತು ಸತ್ಯತೆಯಲ್ಲಿ ಇದೆ. ಉತ್ತರ ಕರ್ನಾಟಕದ ಜಾನಪದ ಗೀತೆಗಳಲ್ಲಿ ಭಾಷೆ ಕಟುವಾಗಿರಬಹುದು, ಆದರೆ ಭಾವನೆ ಶುದ್ಧ. ಜೀವನದ ನೋವು, ಬಡತನ, ಹಸಿವು, ಪ್ರೀತಿ ಇವು ಹಾಡಿನಲ್ಲಿ ಇದ್ದರೂ ಅಶ್ಲೀಲತೆ ಅನ್ನೋದು ಇಲ್ಲ.

ಈ ಭಾಗದ ಜಾನಪದ ಗೀತೆಗಳು ಶ್ರಮದ ಮಹತ್ವವನ್ನು ಸಾರುತ್ತವೆ. ರೈತ, ಕಾರ್ಮಿಕ, ಮಹಿಳೆ, ಕುರಿಗಾಹಿ ಹೀಗೆ ಹಲವಾರು ಬದುಕಿಗೂ ಗೌರವವಿದೆ. ದೇವರ ಬಗ್ಗೆ ಹಾಡುಗಳಿದ್ದರೂ, ಮನುಷ್ಯನ ಬದುಕೇ ಕೇಂದ್ರಬಿಂದು. ಇದಕ್ಕೇ ಉತ್ತರ ಕರ್ನಾಟಕದ ಜಾನಪದ ಸಾಹಿತ್ಯ ನೆಲದ ಸಾಹಿತ್ಯ ಎಂದು ಕರೆಯಲ್ಪಡುತ್ತದೆ.

ಕಾಲ ಬದಲಾಗಿದೆ. ತಂತ್ರಜ್ಞಾನ, ಯೂಟ್ಯೂಬ್, ಸಾಮಾಜಿಕ ಜಾಲತಾಣಗಳು ಜಾನಪದ ಸಾಹಿತ್ಯವನ್ನು ಜನಪ್ರಿಯಗೊಳಿಸಿರುವುದು ಸತ್ಯ. ಆದರೆ, ಅದೇ ಸಮಯದಲ್ಲಿ ಜಾನಪದ ಎಂಬ ಹೆಸರಿನಲ್ಲಿ ಬರುತ್ತಿರುವ ಕೆಲವು ಇತ್ತೀಚಿನ ಗೀತೆಗಳು ನಿರಾಶೆ ಉಂಟುಮಾಡುತ್ತಿವೆ. ವಿಶೇಷವಾಗಿ ಉತ್ತರ ಕರ್ನಾಟಕದ ಜಾನಪದ ಎಂಬ ಹೆಸರಿನಲ್ಲಿ ಕೆಲವೊಮ್ಮೆ ಅಶ್ಲೀಲ ಪದ ಪ್ರಯೋಗ, ಹೆಣ್ಣಿನ ಅವಮಾನ, ಅತಿರೇಕದ ನೃತ್ಯ, ಅರ್ಥವಿಲ್ಲದ ಸಾಲುಗಳು ಕಾಣಿಸಿಕೊಳ್ಳುತ್ತಿರುವುದು ನೋವಿನ ಸಂಗತಿ.

ಜನಪದ ಸಾಹಿತ್ಯದ ಮೂಲ ಉದ್ದೇಶ ಜನರ ಬದುಕನ್ನು ಹೇಳುವುದು. ಆದರೆ ಈಗ ಕೆಲವೊಮ್ಮೆ ಅದು ಕೇವಲ ವೀಕ್ಷಣೆ, ಲೈಕ್ ಮತ್ತು ಹಣಕ್ಕಾಗಿ ಬಳಸಲ್ಪಡುತ್ತಿದೆ. ಹಳೆಯ ಜಾನಪದ ಗೀತೆಗಳಲ್ಲಿ ಪ್ರೀತಿ ಹೃದಯದಿಂದ ಹರಿಯುತ್ತಿದ್ದರೆ, ಇಂದಿನ ಕೆಲ ಗೀತೆಗಳಲ್ಲಿ ಅದು ದೇಹಕೇಂದ್ರಿತವಾಗಿ ಕುಗ್ಗಿದೆ. ಇದು ಉತ್ತರ ಕರ್ನಾಟಕದ ಸಂಸ್ಕೃತಿಗೆ ಹೊಂದಿಕೆಯಾಗದ ಸಂಗತಿ.

ಹಳೆಯ ಜಾನಪದ ಸಾಹಿತ್ಯ ಜನರನ್ನು ಮೌಲ್ಯಗಳತ್ತ ಕರೆದುಕೊಂಡು ಹೋಗುತ್ತಿತ್ತು. ಇಂದಿನ ಕೆಲವು ಸಾಹಿತ್ಯ ಜನರ ದುರ್ಬಲತೆಯನ್ನು ಬಳಸಿಕೊಳ್ಳುತ್ತಿದೆ. ಮೊದಲು ಹಾಡುಗಳು ಹಿರಿಯರಿಂದ ಕಿರಿಯರಿಗೆ ಪಾಠವಾಗುತ್ತಿದ್ದವು, ಈಗ ಕೆಲವೊಮ್ಮೆ ಅವೇ ಪ್ರಶ್ನಾರ್ಥಕವಾಗಿವೆ. ಉತ್ತರ ಕರ್ನಾಟಕದ ಜನಪದ ಸಾಹಿತ್ಯದಲ್ಲಿ ಇದ್ದ ಗೌರವ, ಸಂಯಮ, ಸಾಮಾಜಿಕ ಹೊಣೆಗಾರಿಕೆ ಇವುಗಳನ್ನು ಇಂದಿನ ತಲೆಮಾರು ಮರುಪರಿಗಣಿಸಬೇಕಾಗಿದೆ. ಹೊಸತನ ಬೇಕು, ಆದರೆ ಮಣ್ಣಿನ ವಾಸನೆ ಕಳೆದುಕೊಳ್ಳಬಾರದು.

ಉತ್ತರ ಕರ್ನಾಟಕದ ಜಾನಪದ ಸಾಹಿತ್ಯವನ್ನು ಉಳಿಸಿಕೊಳ್ಳುವುದು ಕೇವಲ ಕಲಾವಿದರ ಹೊಣೆ ಅಲ್ಲ, ಅದು ನಮ್ಮೆಲ್ಲರ ಜವಾಬ್ದಾರಿ. ಹೊಸ ಜಾನಪದ ಗೀತೆಗಳು ಬರಬೇಕು, ಆದರೆ ಅವು ಸಂಸ್ಕೃತಿಯನ್ನು ಮರೆತಿರಬಾರದು. ಹಳೆಯ ಸಾಹಿತ್ಯವನ್ನು ಅಧ್ಯಯನ ಮಾಡಿ, ಅದರ ಆತ್ಮವನ್ನು ಅರ್ಥ ಮಾಡಿಕೊಂಡು ಹೊಸ ಪ್ರಯೋಗಗಳು ನಡೆದರೆ ಮಾತ್ರ ಜಾನಪದ ಸಾಹಿತ್ಯಕ್ಕೆ ಗೌರವ ಉಳಿಯುತ್ತದೆ. ಶಾಲೆ, ಕಾಲೇಜುಗಳಲ್ಲಿ, ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ, ಶುದ್ಧ ಜಾನಪದ ಸಾಹಿತ್ಯಕ್ಕೆ ಪ್ರೋತ್ಸಾಹ ನೀಡಬೇಕಿದೆ. ಆಗ ಉತ್ತರ ಕರ್ನಾಟಕದ ಜಾನಪದ ಪರಂಪರೆ ಮುಂದಿನ ತಲೆಮಾರಿಗೂ ಜೀವಂತವಾಗಿರುತ್ತದೆ.

ಕನ್ನಡ ಜಾನಪದ ಸಾಹಿತ್ಯ, ವಿಶೇಷವಾಗಿ ಉತ್ತರ ಕರ್ನಾಟಕದ ಜಾನಪದ ಪರಂಪರೆ, ನಮ್ಮ ಸಂಸ್ಕೃತಿಯ ಬೆನ್ನೆಲುಬು. ಅದನ್ನು ಕೇವಲ ಮನರಂಜನೆಗೆ ಸೀಮಿತಗೊಳಿಸುವುದು ನಮ್ಮದೇ ಆದ ಪರಂಪರೆಗೆ ಮಾಡುವ ಅನ್ಯಾಯ. ಹಳೆಯ ಜಾನಪದ ಗೀತೆಗಳು ಬದುಕನ್ನು ಕಟ್ಟಿದವು, ಇಂದಿನ ಜಾನಪದ ಸಾಹಿತ್ಯವೂ ಅದೇ ಕೆಲಸ ಮಾಡಬೇಕು. ಆಗ ಮಾತ್ರ ಜಾನಪದ ಎಂಬ ಪದಕ್ಕೆ ನಿಜವಾದ ಗೌರವ ಸಿಗುತ್ತದೆ.



**– ಮನೋಜ ಮಸನಿ.**
ಪ್ರಶಿಕ್ಷಣಾರ್ಥಿ,
ವಾರ್ತಾ ಇಲಾಖೆ–ಧಾರವಾಡ.

### ಜ. 8, 'ವಿಶ್ವ ಬೆರಳಚ್ಚು ದಿನ'ದ ನಿಮಿತ್ತ ವಿಶೇಷ ಲೇಖನ

# ಹಾಡು ಹಳೆಯದಾದರೇನು, ನಾದ ನವನವೀನ

ಮೊಟ್ಟ ಮೊದಲನೆಯದಾಗಿ 1912ನೇ ಇಸಿವಿಯಲ್ಲಿ ರೆಮಿಂಗಟನ್ ಕಂಪನಿಯವರು ಎಂಟು ಸಾಲುಗಳಲ್ಲಿ ಕನ್ನಡ ಅಕ್ಷರಗಳನ್ನು ಅಳವಡಿಸಿ ಕನ್ನಡ ಬೆರಳಚ್ಚು ಯಂತ್ರವನ್ನು ತಯಾರಿಸಿದರು. 1930ನೇ ಇಸವಿಯಿಂದೀಚೆಗೆ ವಿಧವಿಧವಾದ ಕನ್ನಡ ಬೆರಳಚ್ಚು ಫಲಕಗಳು ರೂಪುಗೊಂಡವು. ಇದರಿಂದ ಕನ್ನಡ ಬೆರಳಚ್ಚು ಯಂತ್ರ ತಯಾರಿಸಲು ಸಹಾಯಕವಾದವು. ಆ ಮಹನೀಯರಲ್ಲಿ ಪ್ರಮುಖರು ಹಾಸನದ ಕೆ. ಅನಂತ ಸುಬ್ಬರಾವ್, ಭದ್ರಾವತಿಯ ವಿ. ನಾಗರಾಜರಾವ್, ಮೈಸೂರಿನ ಎಸ್. ಸುಬ್ಬರಾವ್, ಮುಂಬೈಯ ಚಿಟಗುಪ್ಪಿ, ಬೆಂಗಳೂರಿನ ವಿಜಯಪಾಲಯ್ಯನವರು ಪ್ರಮುಖರು.

ಮುಂದೆ ಕನ್ನಡ ಬೆರಳಚ್ಚು ಸದೃಢವಾಗಿರಲು, ಎಲ್ಲ ಕನ್ನಡದ ಜನರಿಗೆ ಮುಟ್ಟಲು ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಆಗಿನ ಅಧ್ಯಕ್ಷರಾಗಿದ್ದ ತಿ.ತಾ. ಶರ್ಮರವರು ಒಂದು ಸಮಿತಿಯನ್ನು ರಚಿಸಿ ಕನ್ನಡ ಬೆರಳಚ್ಚು ಯಂತ್ರವು ವೇಗವಾಗಿ ಸುಂದರವಾಗಿರಲು ಹಾಲಿ ತಯಾರು ಮಾಡಿದ ಬೆರಳಚ್ಚು ಯಂತ್ರಗಳನ್ನು ಇನ್ನು ವಿಶೇಷ ಆಯಾಮಗಳನ್ನು ಸೃಷ್ಟಿಸಿ ತಯಾರು ಮಾಡಲು ಸಾಧ್ಯವೆಂದು ಪ್ರಯತ್ನಿಸಲಾಯಿತು. ಅದರಂತೆ ಲಿಪಿ ಸುಧಾರಣೆ ಮಾಡಲು ಸರಕಾರ ಶಿಫಾರಸ್ಸು ಮಾಡಿತು. ಇದರ ನಡುವೆ, ಅನೇಕ ವಿದ್ವಾಂಸರು ತಮ್ಮ ಛಲವನ್ನು ಬಿಡದೆ ಕನ್ನಡ ಬೆರಳಚ್ಚು ಯಂತ್ರವನ್ನು ಸುಂದರಗೊಳಿಸಿ, ಸರಳವಾಗಿ, ಅತ್ಯುತ್ತಮವಾಗಿ ಬೆರಳಚ್ಚು ಮಾಡಲು ಅನುಕೂಲವಾಗುವಂತೆ ನಿರ್ಮಿಸಲು ಪಣ ತೊಟ್ಟರು.

ಆ ಸಂದರ್ಭದಲ್ಲಿ ಆಗಿನ ಮುಖ್ಯ ಮಂತ್ರಿಗಳಾಗಿದ್ದ ಎಸ್. ನಿಜಲಿಂಗಪ್ಪನವರು ಈ ಮೂರು ಕನ್ನಡ ಬೆರಳಚ್ಚು ಯಂತ್ರಗಳನ್ನು ತಮ್ಮ ಕಛೇರಿಗೆ ತರಿಸಿಕೊಂಡು ಕೆಲವು ಸಾಹಿತಿಗಳನ್ನು, ತಜ್ಞರನ್ನು, ಕನ್ನಡ ಅಭಿಮಾನಿಗಳನ್ನು ಕರೆಸಿಕೊಂಡು 'ಇಂದು ನಮ್ಮ ಕನ್ನಡ ನಾಡಿಗೆ ನಮ್ಮ ಜನರಿಗೆ ಕನ್ನಡ ಬೆರಳಚ್ಚು ಯಂತ್ರದದ ಸೇವೆಯನ್ನು ದಯಪಾಲಿಸಲು ಈ ಮೂರು ಕನ್ನಡ ಬೆರಳಚ್ಚು ಯಂತ್ರಗಳನ್ನು ಒಂದನ್ನು ಆಯ್ಕೆಮಾಡಿಕೊಂಡು ಕನ್ನಡ ಬೆರಳಚ್ಚು ಯಂತ್ರದ ಉಗಮಕ್ಕೆ ನಾಂದಿ ಹಾಕೋಣವೆಂದು ಹೇಳಿದರು.

ವಿದ್ವಾಂಸರು, ಸಾಹಿತಿಗಳು ಇದಕ್ಕೆ ಸಮ್ಮತಿಸಿ ಕೆ. ಅನಂತಸುಬ್ಬರಾವ್ ಅವರು ನಿರ್ಮಿಸಿದ ಕನ್ನಡ ಬೆರಳಚ್ಚು ಯಂತ್ರಕ್ಕೆ ಮಾನ್ಯತೆ ದೊರೆಯಿತು. ಅಂದಿನ ಸರಕಾರವು 1957ರಲ್ಲಿ ಅಂಗೀಕರಿಸಿತು, ಮುಂದೆ ಹಾಲ್ಡಾ ಕಂಪನಿಯವರು 1961ರಲ್ಲಿ ಮೊಟ್ಟಮೊದಲ ಕನ್ನಡ ಬೆರಳಚ್ಚು ಯಂತ್ರವನ್ನು ತಯಾರಿಸಿಕೊಟ್ಟರು. ನಂತರ ರೆಮಿಂಗಟನ್, ಗೋದ್ರೇಜ್ ಮತ್ತು ಪ್ಯಾಸಿಟ್ ಕಂಪನಿಯವರಿಂದಲೂ ಕನ್ನಡ ಬೆರಳಚ್ಚು ಯಂತ್ರಗಳು ತಯಾರಾದವು. ಮೈಸೂರಿನಲ್ಲಿ ಪ್ರತಿ ವರ್ಷ ನಡೆಯುತ್ತಿರುವ ದಸರಾ ಉತ್ಸವದ ವಸ್ತು ಪ್ರದರ್ಶನದಲ್ಲಿ ಪ್ರಪ್ರಥಮವಾಗಿ ಪ್ರದರ್ಶನಕ್ಕಿಟ್ಟರು. ಆ ಕ್ಷಣದಲ್ಲಿ ಎಲ್ಲರಿಗೂ ಒಂದು ಅದ್ಭುತ ಯಂತ್ರದ ಆಗಮನವಾಯಿತು.

ಈ ಭೂಮಿಗೆ ಜನರ ಕುತೂಹಲ ಮತ್ತು ಕನ್ನಡದ ಮೇಲಿರುವ ಅಭಿಮಾನಕ್ಕಾಗಿ ಕನ್ನಡ ಬೆರಳಚ್ಚು ಯಂತ್ರಗಳೇನು ತಯಾರಾದಾಗ ಮುಂದೆ ಇರುವ ಪ್ರಶ್ನೆ ಪಠ್ಯ–ಪುಸ್ತಕಗಳು ಸರಳವಾಗಿ ಅರ್ಥವಾಗುವಂತೆ ಬೇಗ ಕಲಿಯಲು, ಎಲ್ಲ ವರ್ಗದವರಿಗೂ ಅನುಕೂಲವಾಗುವಂತೆ 1966ರಲ್ಲಿ ಕರ್ನಾಟಕದಲ್ಲಿಯೇ ಪ್ರಪ್ರಥಮವಾಗಿ ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಪುಸ್ತಕಗಳನ್ನು ಮತ್ತು ಕನ್ನಡ ಶೀಘ್ರಲಿಪಿ ಪುಸ್ತಕಗಳನ್ನು ಬರೆದವರು ಸರ್ ಎಸ್.ಆರ್. ಶಿದ್ದರಾಜು. ಇಂದಿಗೂ ಬೆರಳಚ್ಚು ಪುಸ್ತಕಗಳು ಅಜರಾಮರವಾಗಿ ಇಂದು ಕರ್ನಾಟಕದಲ್ಲಿ ರಾರಾಜಿಸುತ್ತಿವೆ ಎಂದರೆ ಅದಕ್ಕೆ ಮೂಲ ಕಾರಣಕರ್ತರು ಎಸ್.ಆರ್. ಸಿದ್ದರಾಜು.

ದೃಢವಾದ ನಂಬಿಕೆ, ವಿಶ್ವಾಸ, ಛಲದೊಂದಿಗೆ, ಸೋಲಿನ ಮತ್ತು ಗಣಕಯಂತ್ರದ ಆರ್ಭಟದೊಂದಿಗೆ ಮೆಲ್ಲಗೆ ಹೆಜ್ಜೆಯನ್ನಿಡುತ್ತ ಪುಟದೇಳುತ್ತ ಸಾಗುತ್ತಿರುವ ನಮ್ಮ ನಿಮ್ಮೆಲ್ಲರ ಬೆರಳಚ್ಚು ಸಂಸ್ಥೆಗಳು ಇಂದು ವಾಣಿಜ್ಯ ವಿದ್ಯಾಸಂಸ್ಥೆಗಳು ಸುವರ್ಣ ಮಹೋತ್ಸವ ಆಚರಿಸುತ್ತಿರುವ ನೂರಾರು ಸಂಸ್ಥೆಗಳು ರಾಜ್ಯದಲ್ಲಿ ರಾರಾಜಿಸುತ್ತಿವೆ.

ಕಂಪ್ಯೂಟರ್ ಶಿಕ್ಷಣದ ಲಗ್ಗೆಯಿಂದಾಗಿ ನಾಯಿ ಕೊಡೆಗಳಂತೆ ತಲೆ ಎತ್ತಿ ನಿಂತಿರುವ ಕಂಪ್ಯೂಟರ್ ಶಿಕ್ಷಣಕ್ಕೆ ಸವಾಲಾಗಿ ನಿಂತಿರುವ ಮಾಸ್ಟರ್ ಪೀಸ್ ಟೈಪಿಂಗ್. ಅಲ್ಲದೆ, ಸ್ಥಿರವಾಗಿ ನಿಲ್ಲದ ಕೋರ್ಸುಗಳು, ಶಾಶ್ವತ (ಟೈಪಿಂಗ್) 50–60 ವರ್ಷಗಳಿಂದ ಸ್ಥಿರವಾಗಿ ನಿಂತ ಸಿಲೆಬಸ್, ಇಂದಿಗೂ ಬೆರಳಚ್ಚು ಬಾರದವರು ಕಂಪ್ಯೂಟರ್ ಮುಂದೆ ನಿಸ್ಸಹಾಯಕರು. ಸ್ಥಿರ ಮತ್ತು ಅಸ್ಥಿರ ಇವುಗಳ ವ್ಯತ್ಯಾಸ ಅಜಗಜಾಂತರವಾಗಿದೆ. ಹಿಂದೆ ಯಾವುದೇ ಕೆಲಸವಾಗಬೇಕಾದರೆ, ವಿಷಯ ತಿಳಿಯಪಡಿಸಲು ಪತ್ರ ವ್ಯವಹಾರಕ್ಕೆ ಟೈಪಿಂಗ್ ಮಾಡಿದ ಕಾಗದದ ಮೂಲಕವೇ ಪ್ರಸ್ತಾಪವಿರುತ್ತಿತ್ತು. ಇಂದು ಸರಕಾರಿ ಕಛೇರಿಗಳಲ್ಲಿ 100ಕ್ಕೆ 100ರಷ್ಟು ಟೈಪಿಂಗ್ ಅವಶ್ಯಕವಾಗಿದೆ. ಇಂದು ಗಣಕಯಂತ್ರಗಳು ಕಚೇರಿಯ ಮೂಲೆ ಮೂಲೆಗಳಲ್ಲಿ ಇದ್ದರೂ ಸಹ ಟೈಪಿಂಗ್–ಬೆರಳಚ್ಚು ಜ್ಞಾನ ಇಲ್ಲದ ಕೆಲಸಗಾರರು ನೋವು, ಒತ್ತಡ, ನಿರಾಶೆ, ಸೋಲುಗಳು ದಿನನಿತ್ಯ ಅನುಭವಿಸುವಂತಾಗಿದೆ. ಅದೇ ಟೈಪಿಂಗ್ ಕಲಿತು ಬೆರಳಚ್ಚು ಜ್ಞಾನ ಬಲ್ಲ ಉದ್ಯೋಗಿಗಳು ಕೆಲಸಲ್ಲಿ ನಿರಾತಂಕವಾಗಿ, ಸುಲಲಿತವಾಗಿ, ನಿರ್ಭಯವಾಗಿ ಕಛೇರಿಯ ಕೆಲಸಗಳನ್ನು ಬೇಗ ಸಾಗುವಂತೆ ಮಾಡುವ ಶಿಕ್ಷಣ ಟೈಪಿಂಗ್ ಶಿಕ್ಷಣ.

ಚಹದಂಗಡಿಯಂತೆ ಕಂಪ್ಯೂಟರ್ ಶಿಕ್ಷಣದ ಅಂಗಡಿಗಳು ತಲೆ ಎತ್ತಿವೆ. ಇಂತಹ ಸಣ್ಣ ಮಟ್ಟದ ಕಂಪ್ಯೂಟರ್ ಶಿಕ್ಷಣ ಕೇಂದ್ರಗಳು ಅಷ್ಟೇ ಬೇಗ ಮುಚ್ಚಿಹೋಗುತ್ತಿವೆ. ಕಂಪ್ಯೂಟರ್ ಕಲಿತವರು ಟೈಪಿಂಗ್ ಶಿಕ್ಷಣ ಕಲಿಯದೇ ಇದ್ದವರಿಗೆ ಇದೊಂದು ದೊಡ್ಡ ಸಮಸ್ಯೆ ಎದುರಾಗುತ್ತದೆ. ಕಂಪ್ಯೂಟರ್‌ನಲ್ಲಿ ನಮಗೆ ಬೇಕಾದ ಸಲಕರಣೆಗಳನ್ನು ಕ್ಷಣದಲ್ಲಿ ಕೊಡುವ ಕಂಪ್ಯೂಟರ್, ಆದರೆ ಕ್ಷಣದಲ್ಲಿ ಟೈಪ್ ಮಾಡುವ ಪದ್ಧತಿ ಹೇಗೆ ಎಂದು ಯಕ್ಷ ಪ್ರಶ್ನೆಯಾಗಿಯೇ ಉಳಿದಿದೆ. ಇಂದು ಕಂಪ್ಯೂಟರ್ ಯುಗದಲ್ಲಿಯು ಟೈಪಿಂಗ್ ಶಿಕ್ಷಣದ ಮಹತ್ವ ಅರಿವಾಗುತ್ತಿದೆ, ಬೆರಳಚ್ಚು ಯಂತ್ರದ ಸಾಮರ್ಥ ಮತ್ತೆ ಬೆಳಕಿಗೆ ಬರುತ್ತಿದೆ. ಇಂದು ನಮ್ಮ ಕರ್ನಾಟಕದಲ್ಲಿ ನೂರಾರು ವಾಣಿಜ್ಯ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. 15 ಸಾವಿರ ವಿದ್ಯಾರ್ಥಿಗಳು ಟೈಪಿಂಗ್ ಪರೀಕ್ಷೆಯನ್ನು ತೆಗೆದುಕೊಳ್ಳುತ್ತಿದ್ದಾರೆ. ಇಂಟರ್‌ನೆಟ್ ಯುಗದಲ್ಲಿ ಕಂಪ್ಯೂಟರ್ ಕೀಲಿಮಣೆಯ ಮೇಲೆ ಹಿಡಿತ ಸಾಧಿಸಿ ವೇಗವಾಗಿ ಮಾಹಿತಿ ಟೈಪ್ ಮಾಡುವ ಸಾಮರ್ಥ, ಕೌಶಲ್ಯ ನಿಮ್ಮದಾಗಬೇಕಾದರೆ, ಕಂಪ್ಯೂಟರ್‌ನಲ್ಲಿ ಚೆನ್ನಾಗಿ ನಿರ್ವಹಣೆ ಮಾಡಬೇಕಾದರೆ ಟೈಪಿಂಗ್ ಶಿಕ್ಷಣ ಅತ್ಯವಶ್ಯಕವಾಗಿದೆ. ಟೈಪಿಂಗ್ ಶಿಕ್ಷಣ ಯುಗ ಹೊಸ ಹೊಳಪಿನಿಂದ ಮತ್ತೆ ಪ್ರಾರಂಭವಾಗಲಿ ಎಂಬ ಆಶಯದೊಂದಿಗೆ...

**– ಡಾ. ತಯಬಅಲಿ ಅ. ಹೊಂಬಳ.**
ಶ್ರೀ ಕಲ್ಮೇಶ್ವರ ಬೆರಳಚ್ಚು, ಕಂಪ್ಯೂಟರ್ ವಿದ್ಯಾಲಯ,
ಗದಗ.

## ಅಶ್ರುವಾಯು ಪ್ರಯೋಗ, 10 ಜನರ ಬಂಧನ



■ **ವಿಜಯಸಾಕ್ಷಿ ಸುದ್ದಿ, ನವದೆಹಲಿ**

ದೆಹಲಿಯ ತುರ್ಕಮನ್ ಗೇಟ್–ರಾಮ್ಲೀಲಾ ಮೈದಾನ ಪ್ರದೇಶದಲ್ಲಿರುವ ಶತಮಾನಗಳಷ್ಟು ಹಳೆಯದಾದ ಫೈಜ್–ಎ–ಇಲಾಹಿ ಮಸೀದಿಯ ಬಳಿ ಬುಧವಾರ ಮುಂಜಾನೆ ನಡೆದ ತೆರವು ಕಾರ್ಯಾಚರಣೆಗೆ ಸ್ಥಳೀಯರು ವಿರೋಧ ವ್ಯಕ್ತಪಡಿಸಿದ್ದು, ಆ ನಂತರ ಸ್ಥಳದಲ್ಲಿ ಉದ್ವಿಗ್ನತೆ ಉಂಟಾಗಿದೆ, ಇದು 10 ಜನರನ್ನು ಬಂಧಿಸಲು ಕಾರಣವಾಯಿತು.

ಡಿಸಿಪಿ ನಿಧಿನ್ ವಲ್ಸನ್ ಅವರ ಪ್ರಕಾರ, ಪೊಲೀಸ್ ತಂಡಗಳ ಮೇಲೆ ಕಲ್ಲು ತೂರಾಟದಲ್ಲಿ ಸುಮಾರು 25–30 ಜನರು ಭಾಗಿಯಾಗಿದ್ದಾರೆಂದು ಹೇಳಲಾಗಿದ್ದು, ದಾಳಿಯಲ್ಲಿ ಐದು ಪೊಲೀಸರಿಗೆ ಸಣ್ಣಪುಟ್ಟ ಗಾಯಗಳಾಗಿವೆ.

"ಪರಿಸ್ಥಿತಿಯನ್ನು ನಿಯಂತ್ರಿಸಲು ನಾವು ಅಶ್ರುವಾಯು ಪ್ರಯೋಗಿಸಬೇಕಾಯಿತು. ಒಂದು ಬ್ಯಾಂಕ್ವೆಟ್ ಹಾಲ್ ಮತ್ತು ಔಷಧಾಲಯವನ್ನು ಕೆಡವಲಾಯಿತು. ಅನಾನುಕೂಲತೆಯನ್ನು ಕಡಿಮೆ ಮಾಡಲು ರಾತ್ರಿಯಲ್ಲಿ ಕಾರ್ಯಾಚರಣೆ ನಡೆಸಲಾಯಿತು. ಪರಿಸ್ಥಿತಿ ಈಗ ಸಂಪೂರ್ಣವಾಗಿ ನಿಯಂತ್ರಣದಲ್ಲಿದೆ," ಎಂದು ಅವರು ಹೇಳಿದ್ದಾರೆ. ಕಲ್ಲು ತೂರಾಟದಲ್ಲಿ ಭಾಗಿಯಾಗಿದ್ದಾರೆ ಎನ್ನಲಾದವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಗಲಭೆ, ಸಾರ್ವಜನಿಕ ಸೇವಕನ ಮೇಲೆ ಹಲ್ಲೆ ಮತ್ತು ಸರ್ಕಾರಿ ಕರ್ತವ್ಯಕ್ಕೆ ಅಡ್ಡಿಪಡಿಸಿದ ವಿಭಾಗಗಳ ಅಡಿಯಲ್ಲಿ ಅಪರಿಚಿತ ವ್ಯಕ್ತಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಶ್ರೀ ಶಿವಶಾಂತವೀರ ಶರಣರಿಂದ ದೀರ್ಘದಂಡ ನಮಸ್ಕಾರ



■ **ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಬಳಗಾನೂರಿನ ಪೂಜ್ಯ ಶ್ರೀ ಶಿವಶಾಂತವೀರ ಶರಣರು ಕೊಪ್ಪಳ ಗವಿಮಠದ ಮಹಾದ್ವಾರದಿಂದ ಪ್ರಾರಂಭಿಸಿ ಶ್ರೀ ಗವಿಮಠದ ಬೆಟ್ಟದ ಮೇಲಿನ ಶ್ರೀ ಮ.ನಿ.ಪ್ರ.ಜ.ಲಿಂ ಮರಿಶಾಂತವೀರ ಶಿವಯೋಗಿಗಳ ಗದ್ದುಗೆಯವರಗೆ ಹೂವಿನ ಹಾಸಿಗೆಯ ಮೇಲೆ ಭಕ್ತಿಯ ದೀರ್ಘದಂಡ ನಮಸ್ಕಾರ ಹಾಕಿದರು.

ಶರಣರ ಹಿಂದೆ ಇಷ್ಟಾರ್ಥ ಸಿದ್ಧಿಗಾಗಿ ಹರಕೆ ಹೊತ್ತುಕೊಂಡ ಅಪಾರ ಭಕ್ತ ಸಮೂಹವೇ ದೀರ್ಘದಂಡ ನಮಸ್ಕಾರ ಹಾಕುತ್ತದೆ. ಚಿಕ್ಕೇನಕೊಪ್ಪದ ಲಿಂ. ಶ್ರೀ ಚನ್ನವೀರ ಶರಣರು ತಮ್ಮ ಗುರುಗಳಾದ ಶ್ರೀ ಮ.ನಿ.ಪ್ರ.ಜ.ಲಿಂ ಮರಿಶಾಂತವೀರ ಶಿವಯೋಗಿಗಳಿಂದ ಚಿನ್ಮಯಾನುಗ್ರಹ ದೀಕ್ಷೆ ಪಡೆದ ನಂತರ ಅಂದಿನಿಂದ ನಿರಂತರವಾಗಿ ಸುಮಾರು ಆರು ದಶಕಗಳಿಂದ ಶ್ರೀ ಮ.ನಿ.ಪ್ರ.ಜ.ಲಿಂ. ಮರಿಶಾಂತವೀರ ಶಿವಯೋಗಿಗಳ ಗದ್ದುಗೆಯ ತನಕ ದೀರ್ಘದಂಡ ನಮಸ್ಕಾರ ಹಾಕುವುದರ ಮೂಲಕ ಗುರುಗಳಿಗೆ ಭಕ್ತಿಯ ನಮನಗಳನ್ನು ಅರ್ಪಿಸುತ್ತಿದ್ದರು. ಅವರು ಲಿಂಗೈಕ್ಯರಾದ ನಂತರ ಇದೀಗ ಬಳಗಾನೂರಿನ ಶ್ರೀ ಶಿವಶಾಂತವೀರ ಶರಣರು ತಮ್ಮ ಗುರು ಪರಂಪರೆಯನ್ನು ಮುನ್ನಡೆಸಿಕೊಂಡು ಬಂದಿದ್ದಾರೆ.

ಈ ಕಾರ್ಯಕ್ರಮವನ್ನು ನೋಡಲು ಜಾತ್ರೆಯಷ್ಟೇ ಜನರು ಆಗಮಿಸಿ ಶರಣರ ದರ್ಶನಾಶೀರ್ವಾದ ಪಡೆಯುತ್ತಾರೆ. ಹೊಂಬಳ, ಚಿಕ್ಕೇನಕೊಪ್ಪ, ಸೂಡಿ ಗ್ರಾಮದ ಸದ್ಭಕ್ತರ ಭಜನಾ ಮಂಡಳಿಯವರ ಭಕ್ತಿಗೀತೆಗಳು, ಜಯಘೋಷಗಳು, ಭಕ್ತಿಭಾವದ ಘೋಷಣೆಗಳು, ಭಕ್ತರೆಲ್ಲರ ಎದೆಯಲ್ಲಿ ಪ್ರತಿಧ್ವನಿಸಿದವು.

### ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳೊಂದಿಗೆ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷ ಟಿ. ಶಾಮ್ ಭಟ್ ಸಭೆ

# ದೌರ್ಜನ್ಯ ಪೀಡಿತ ಕುಟುಂಬಕ್ಕೆ ಭರವಸೆ ಮೂಡಿಸಿ

■ **ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷ ಟಿ. ಶಾಮ್ ಭಟ್ ಅವರು ಹುಬ್ಬಳ್ಳಿ ತಾಲೂಕಿನ ಇನಾಂವೀರಾಪೂರ ಗ್ರಾಮದ ದಲಿತ ದೌರ್ಜನ್ಯ ಪೀಡಿತ ಕುಟುಂಬ ಸದಸ್ಯರ ಭೇಟಿ ಮತ್ತು ಗ್ರಾಮದಲ್ಲಿನ ವಾಸ್ತವಿಕ ಪರಿಸ್ಥಿತಿಯ ಅಧ್ಯಯನದ ನಂತರ ಧಾರವಾಡ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳೊಂದಿಗೆ ಸಭೆ ಜರುಗಿಸಿದರು.



ಸಭೆಯಲ್ಲಿ ಟಿ. ಶಾಮ್ ಭಟ್ ಮಾತನಾಡಿ, ದೌರ್ಜನ್ಯ ಪೀಡಿತ ಕುಟುಂಬಕ್ಕೆ ಭದ್ರತೆ ಕುರಿತು ಸಂಪೂರ್ಣ ಭರವಸೆ ಮೂಡಿಸಬೇಕು. ಗ್ರಾಮದಲ್ಲಿ ಎಲ್ಲ ಕುಟುಂಬಗಳು ಪ್ರಕರಣ ಪೂರ್ವದಲ್ಲಿ ಇದ್ದಂತೆ ಅನ್ಯೋನ್ಯವಾಗಿ ಪರಸ್ಪರ ಪ್ರೀತಿ, ವಿಶ್ವಾಸದಿಂದ ವಾಸಿಸುವಂತೆ ವಾತಾವರಣ ರೂಪಿಸಬೇಕು. ಈ ನಿಟ್ಟಿನಲ್ಲಿ ಅಗತ್ಯವಿದ್ದರೆ ಗ್ರಾಮದಲ್ಲಿ ಮತ್ತಷ್ಟು ಸಭೆಗಳನ್ನು ಆಯೋಜಿಸಬೇಕು. ಗ್ರಾಮಸ್ಥರಲ್ಲಿ ಆಗಲಿ ಅಥವಾ ದೊಡಮನಿ ಕುಟುಂಬದಲ್ಲಿ ಯಾವುದೇ ಭಯದ ವಾತಾವರಣ ಇರದಂತೆ ನೋಡಿಕೊಳ್ಳಬೇಕು. ಯಾವುದೇ ವ್ಯಕ್ತಿ ಅಥವಾ ಕುಟುಂಬ ಸದಸ್ಯರ ಮಾನವ ಹಕ್ಕುಗಳ ಉಲ್ಲಂಘನೆ ಆಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ರಾಜ್ಯ ಮಾನವ ಹಕ್ಕುಗಳ ಆಯೋಗದ ಸದಸ್ಯ ಎಸ್.ಕೆ. ವಂಟಿಗೊಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಡಿವೈಎಸ್‌ಪಿ ವಿನೋದ ಮುಕ್ತೆದಾರ, ಡಿಸಿಆರ್‌ಇ ಡಿವೈಎಸ್‌ಪಿ ಸಂದೀಪಸಿಂಗ್ ಮುರಗೋಡ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್.ಎಮ್. ಹೊನಕೇರಿ, ಡಿಮ್ಹಾನ್ಸ್ ನಿರ್ದೇಶಕ ಡಾ. ಅರುಣಕುಮಾರ ಎಮ್.ಎಸ್, ತಹಸೀಲ್ದಾರ ಜಿ.ಆರ್. ಮಜ್ಜಗಿ, ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಮುರಗೇಶ ಚನ್ನಣ್ಣನವರ, ವೀರಭದ್ರಪ್ಪ ಕಡಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪಿ. ಶುಭ, ಸಹಾಯಕ ನಿರ್ದೇಶಕಿ ಪ್ರಿಯದರ್ಶಿನಿ ಹಿರೇಮಠ, ತಾಲೂಕಾ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅತೀಕಾ ಸಿದ್ದಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

ಪ್ರಕರಣದ ತನಿಖೆಯನ್ನು ಈಗಾಗಲೇ ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯಕ್ಕೆ ವರ್ಗಾಯಿಸಲಾಗಿದೆ. ಪೊಲೀಸ್ ಇಲಾಖೆ ತನಿಖೆಗೆ ಸಹಕಾರ ನೀಡಿ, ಗ್ರಾಮದಲ್ಲಿ ಅಗತ್ಯವಿದ್ದರೆ ಇನ್ನಷ್ಟು ಸೂಕ್ತ ಬಂದೋಬಸ್ತ್ ಕ್ರಮವಹಿಸಬೇಕು. ಡಿಸಿಆರ್‌ಇ ಪಾರದರ್ಶಕ ತನಿಖೆ ಮಾಡಿ ಆದಷ್ಟು ಬೇಗ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿಯನ್ನು ಸಲ್ಲಿಸಬೇಕು. ಸಮಾಜ ಕಲ್ಯಾಣ ಇಲಾಖೆ ನಿಯಮಾನುಸಾರ ಕುಟುಂಬಕ್ಕೆ ಅಗತ್ಯ ನೆರವು ನೀಡಬೇಕು. ಜಿಲ್ಲಾಡಳಿತ ಪ್ರಕರಣದ ಕುರಿತು ಸಂಬಂಧಿಸಿದ ಎಲ್ಲ ಇಲಾಖೆಗಳಿಂದ ಕೈಗೊಂಡ ಕ್ರಮಗಳ ಬಗ್ಗೆ ವರದಿ ಪಡೆದು ಆಯೋಗಕ್ಕೆ ಸಲ್ಲಿಸಬೇಕು. ಗ್ರಾಮದ ಶಾಂತಿ, ಸುವ್ಯವಸ್ಥೆ ಕಾಪಡಲು ಜಿಲ್ಲಾಡಳಿತ ನಿಗಾ ವಹಿಸಬೇಕೆಂದು ಟಿ. ಶಾಮ್ ಭಟ್ ಹೇಳಿದರು.

# ರಾಜ್ಯ ಸರ್ಕಾರದ ಪಾಲಿನ ಹಣ ಬಿಡುಗಡೆ ಮಾಡಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೈಪಾಸ್ ಮೂಲಕ ಸಂಚರಿಸುವ ವಿಶೇಷ ರೈಲುಗಳು ಗದಗ ಮೇನ್ ಜಂಕ್ಷನ್ ಮೂಲಕ ಸಂಚಾರ ಮಾಡುವಂತೆ ಕೇಂದ್ರ ಸರ್ಕಾರದ ಗಮನಕ್ಕೆ ತರಬೇಕು ಎಂದು ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪುರ ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಅವರಲ್ಲಿ ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ನೂತನ ರೈಲು ಮಾರ್ಗದ ಗದಗ-ಯಲವಗಿ, ಗದಗ ಬಿಂಕದಕಟ್ಟಿ, ಹರ್ತಿ-ಮಾಗಡಿ-ಶಿರಹಟ್ಟಿ ಮಾರ್ಗದ ಮೂಲಕ ಲಕ್ಷ್ಮೇಶ್ವರ ಮೂಲಕ ಯಲವಗಿ ತಲುಪುವ ಈ ಮಾರ್ಗ 58 ಕಿಲೋಮೀಟರ್ ದೂರದಲ್ಲಿದೆ. ಈ ಮಾರ್ಗದಲ್ಲಿ ಭೂಸ್ವಾಧೀನದ ಜಮೀನುಗಳಲ್ಲಿ ಯಾವುದೇ ಬೆಳೆಗಳನ್ನು ಬೆಳೆಯುತ್ತಿಲ್ಲ. ಭೂಮಿ ಸ್ವಾಧೀನಪಡಿಸಲು ಉಳಿದ ಹಣವನ್ನು ರಾಜ್ಯ ಸರ್ಕಾರದಿಂದ ಬಿಡುಗಡೆ ಮಾಡಲು ವಿನಂತಿಸಿಕೊಂಡರು.

ಈ ಮಾರ್ಗ ಪೂರ್ಣ ಆದರೆ ಶಿರಹಟ್ಟಿ, ಲಕ್ಷ್ಮೇಶ್ವರ ಭಾಗದ ರೈತರಿಗೆ ಹಾಗೂ ವ್ಯಾಪಾರಸ್ಥರಿಗೆ ಅನುಕೂಲ ಆಗಲಿದೆ.

ಮುಂಬರುವ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಮುಂಗಡ ಪತ್ರದಲ್ಲಿ ಈ ಯೋಜನೆಗಳ ಸಲುವಾಗಿ ಹಣವನ್ನು ಮೀಸಲು ಇಡಬೇಕು ಎಂದು ಶಾಸಕರಲ್ಲಿ ಮನವಿ ಮಾಡಿದರು.

---

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನೇತೃತ್ವದಲ್ಲಿ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆ

# ಪಿಡಿಪಿಎಸ್ ಯೋಜನೆಯಡಿ ಮೆಕ್ಕೆಜೋಳ ಖರೀದಿ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸಕ್ತ ಸಾಲಿನ ಮಾರುಕಟ್ಟೆ ಮಧ್ಯ ಪ್ರವೇಶ ಯೋಜನೆಯ ಬೆಲೆ ವ್ಯತ್ಯಾಸ ಪಾವತಿ (ಪಿಡಿಪಿಎಸ್) ಯೋಜನೆಯಡಿ ಮೆಕ್ಕೆಜೋಳ ಖರೀದಿಸಲು ಮಾರುಕಟ್ಟೆ ಮಧ್ಯಪ್ರವೇಶ ದರ ಪ್ರತಿ ಕ್ವಿಂಟಲ್‌ಗೆ 2150ರಂತೆ ಸರ್ಕಾರ ಜನವರಿ 4ರಿಂದ ಆದೇಶ ಹೊರಡಿಸಿದೆ. ಮೆಕ್ಕೆಜೊಳವನ್ನು ರಾಜ್ಯ ಸಹಕಾರಿ ಮಾರಾಟ ಮಂಡಳ ನಿಯಮಿತ ಇವರ ಮುಖಾಂತರ ಖರೀದಿಸಲು ತಿಳಿಸಿದೆ. ಪ್ರಸಕ್ತ ಮಾರುಕಟ್ಟೆಯಲ್ಲಿ ಮೆಕ್ಕೆಜೋಳ ದರ ಪ್ರತಿ ಕ್ವಿಂಟಲ್‌ಗೆ 1,900ರಲ್ಲಿ ವಹಿವಾಟಾಗುತ್ತಿದ್ದು, ವ್ಯತ್ಯಾಸದ ಮೊತ್ತ ರೂ. 250ನ್ನು ಸರ್ಕಾರದ ನಿಯಮಾನುಸಾರ ಅರ್ಹ ರೈತರಿಗೆ ತಲುಪಿಸುವ ಕ್ರಮ ಸಮರ್ಪಕವಾಗಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಆದೇಶಿಸಿದರು.



ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ಸೋಮವಾರ ನಡೆದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗೆ ಮೆಕ್ಕೆಜೋಳ ಉತ್ಪನ್ನವನ್ನು ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಕೃಷಿ ಉತ್ಪನ್ನ ಮಾರುಕಟ್ಟೆ /ಉಪ ಮಾರುಕಟ್ಟೆಗಳಲ್ಲಿ ಯುಎನ್‌ಪಿ ವೇದಿಕೆ ಮೂಲಕ 3.86 ಲಕ್ಷ ಕ್ವಿಂಟಲ್ ಪ್ರಮಾಣದಲ್ಲಿ ಸರ್ಕಾರದ ಆದೇಶದನ್ವಯ ವಹಿವಾಟು ಮಾಡಲು ತೀರ್ಮಾನಿಸಲಾಗಿದ್ದು, ಅದರಂತೆ ಕ್ರಮ ವಹಿಸುವಂತೆ ಸೂಚಿಸಿದರು.

ಈ ಯೋಜನೆಯಿಂದ ಪ್ರತಿ ಎಕರೆಗೆ 12 ಕ್ವಿಂಟಾಲ್‌ನಂತೆ, ಫ್ರುಟ್ಸ್ ತಂತ್ರಾಂಶದಲ್ಲಿ ಲಭ್ಯವಾಗುವ ರೈತರು ಹೊಂದಿರುವ ಜಮೀನಿನ ವಿಸ್ತೀರ್ಣಕ್ಕನುಗುಣವಾಗಿ ಪ್ರತಿ ರೈತರಿಗೆ ಗರಿಷ್ಠ 50 ಕ್ವಿಂಟಾಲ್‌ಗೆ ಮಿತಿಗೊಳಿಸಿ ವ್ಯತ್ಯಾಸದ ಮೊತ್ತವನ್ನು ನೀಡಬೇಕು. ಮೆಕ್ಕೆಜೋಳದ ಎಫ್.ಎ.ಕ್ಯೂ ಗುಣಮಟ್ಟವನ್ನು ಕಡ್ಡಾಯವಾಗಿ ಪರಿಶೀಲಿಸಿ ದೃಢೀಕರಿಸಲು ತಾಂತ್ರಿಕ ಅಧಿಕಾರಿಗಳನ್ನು ನೇಮಿಸಬೇಕು. ಈಗಾಗಲೇ ರಾಜ್ಯ ಸರ್ಕಾರದ ವತಿಯಿಂದ ಎಥೆನಾಲ್ ಉತ್ಪಾದನೆಗಾಗಿ, ಕುಕ್ಕುಟ ಮತ್ತು ಪಶು ಆಹಾರ ತಯಾರಿಕಾ ಘಟಕಗಳಿಗೆ ಹಾಗೂ ಕೆಎಂಎಫ್‌ಗಳಿಗೆ ಅವಶ್ಯವಿರುವ ಮೆಕ್ಕೆಜೋಳ ಪೂರೈಕೆ ಮಾಡಿರುವ ರೈತರಿಗೆ ಸದರಿ ಯೋಜನೆಯು ಅನ್ವಯಿಸದಂತೆ ತಂತ್ರಾಂಶದಲ್ಲಿ ಇಂದೀಕರಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

ಸರ್ಕಾರದಿಂದ ಮೆಕ್ಕೆಜೋಳದ ಬೆಲೆ ವ್ಯತ್ಯಾಸ ಮೊತ್ತ ಪಾವತಿಯನ್ನು ಡಿಬಿಟಿ ಮೂಲಕ ರೈತರಿಗೆ ಪಾವತಿಸಲು ನಿಯಮಾನುಸಾರ ಕ್ರಮ ಕೈಗೊಳ್ಳಬೇಕು. ಸದರಿ ಯೋಜನೆಯಡಿ ರೈತರ ನೋಂದಣಿ ಕಾರ್ಯವನ್ನು ಯೋಜನಾ ಅನುಷ್ಠಾನದ ಏಜೆನ್ಸಿ ವತಿಯಿಂದ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಪಿಎಂಸಿ ಪ್ರಾಂಗಣದಲ್ಲಿ ತೆರೆಯುವ ಕೇಂದ್ರಗಳಲ್ಲಿ ಮಾತ್ರ ನೊಂದಾಯಿಸಲು ಜಿಲ್ಲಾಧಿಕಾರಿಗಳು ತಿಳಿಸಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕಿ ಸುಧಾ ಬಂಡಿ ಮಾತನಾಡಿ, ಸದರಿ ಯೋಜನೆಯ ಮೆಕ್ಕೆಜೋಳ ಖರೀದಿಗೆ ಜಿಲ್ಲೆಯ ಗದಗ, ನರಗುಂದ, ಲಕ್ಷ್ಮೇಶ್ವರ, ಮುಂಡರಗಿ, ಗಜೇಂದ್ರಗಡ ಎಪಿಎಂಸಿ ಪ್ರಾಂಗಣಗಳಲ್ಲಿ ಖರೀದಿ ಕೇಂದ್ರ ತೆರೆಯಲಾಗುವುದು ಎಂದರು.

ಸಭೆಯಲ್ಲಿ ತೋಟಗಾರಿಕೆ ಇಲಾಖೆ, ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ಸಹಕಾರ ಸಂಘಗಳ ಇಲಾಖೆ ಅಧಿಕಾರಿಗಳು, ಮಾರ್ಕೆಟಿಂಗ್ ಫೆಡರೇಷನ್ ಶಾಖಾ ವ್ಯವಸ್ಥಾಪಕರು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿಗಳು ಇತರರು ಹಾಜರಿದ್ದರು.

> ಮೆಕ್ಕೆಜೋಳ ಉತ್ಪನ್ನದ ಮೊದಲ ವಹಿವಾಟು ಯುಎಂಪಿ ತಂತ್ರಾಂಶದಲ್ಲಿ ಆಗುವ ದಿನಾಂಕದಿಂದ ರಾಜ್ಯಾದ್ಯಂತ ಒಂದು ತಿಂಗಳ ಅವಧಿಗೆ ಮಾತ್ರ ಈ ಯೋಜನೆ ಚಾಲ್ತಿಯಲ್ಲಿರುತ್ತದೆ. ಈ ಅವಧಿಯಲ್ಲಿಯೇ ಅರ್ಹ ರೈತರಿಗೆ ಸೌಲಭ್ಯ ಲಭ್ಯವಾಗುವಂತೆ ನೋಡಿಕೊಳ್ಳಬೇಕು. ರಾಜ್ಯ ಸಹಕಾರ ಮಾರಾಟ ಮಂಡಳ ಮತ್ತು ಎಪಿಎಂಸಿ ಸಮಿತಿಯ ಕಾರ್ಯದರ್ಶಿಗಳು ದಿನಂಪ್ರತಿ ಆವಕವಾಗುವ ಮೆಕ್ಕೆಜೋಳದ ಉತ್ಪನ್ನದ ಪ್ರಮಾಣ ವಹಿವಾಟಾದ ಪ್ರಮಾಣ ಮತ್ತು ರೈತರ ಸಂಖ್ಯೆ ಇತ್ಯಾದಿ ವಿವರಗಳನ್ನು ಅಂದಿನ ದಿನವೇ ಯುಎಂಪಿ ವೇದಿಕೆಯಲ್ಲಿ ತಪ್ಪದೇ ಇಂದೀಕರಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕಟ್ಟುನಿಟ್ಟಾಗಿ ಸೂಚನೆ ನೀಡಿದರು.

---

ವಿರಕ್ತಮಠದ ಜಾತ್ರಾ ಮಹೋತ್ಸವದ ನಿಮಿತ್ತ ಬಸವೇಶ್ವರ ಪುರಾಣ ಪ್ರವಚನ

# ಮಠ-ಮಾನ್ಯಗಳು ಬದುಕನ್ನು ಸಾರ್ಥಕಗೊಳಿಸುತ್ತವೆ



> ಮಠಗಳು ಸಾಂಸ್ಕೃತಿಕ ಶ್ರದ್ಧಾ ಕೇಂದ್ರಗಳು. ಇಲ್ಲಿ ನಡೆಯುವ ಕಾರ್ಯಕ್ರಮಗಳಿಂದ ಗ್ರಾಮದ ಜನರಲ್ಲಿ ಸಮಾನತೆ, ಸಹಬಾಳ್ವೆ, ಅನ್ಯೋನ್ಯತೆ, ಸ್ನೇಹ, ಪ್ರೀತಿ, ಬಾಂಧ್ಯವ್ಯ, ಮಾನವೀಯ ಮೌಲ್ಯಗಳು ಒಡಮೂಡಿ ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ. ಮಕ್ಕಳು ತಂದೆ-ತಾಯಿ ಪಾಲಕರನ್ನು ಅನುಕರಣೆ ಮಾಡುತ್ತವೆ. ಈ ನಿಟ್ಟಿನಲ್ಲಿ ಹಿರಿಯರು ಟಿವಿ, ಮೊಬೈಲ್‌ನಿಂದ ದೂರವಿದ್ದು ಮಠ-ಮಾನ್ಯಗಳು, ದೇವಸ್ಥಾನಗಳ ಸಾಮೀಪ್ಯ ಹೊಂದಬೇಕು. ಇಲ್ಲಿ ನಡೆಯುವ ಪುರಾಣ-ಪ್ರವಚನ, ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ತೊಡಗಿಸಬೇಕು ಎಂದು ಡಾ. ಎಂ.ಆರ್. ಕಲಿವಾಳಮಠ ಹೇಳಿದರು.

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಠ-ಮಾನ್ಯಗಳು ಮಾಡುವ ಮಾಡುವ ಶಿಕ್ಷಣ ಸೇವೆ, ಸಂಸ್ಕಾರ ದೀಕ್ಷೆ, ಧರ್ಮ ಜಾಗೃತಿ, ಪುರಾಣ, ಪ್ರವಚನ, ಜಾತ್ರೆಗಳು ಜನರನ್ನು ಸನ್ಮಾರ್ಗ, ಸಾರ್ಥಕ ಬದುಕಿನೆಡೆಗೆ ಸಾಗಿಸುತ್ತವೆ ಎಂದು ಚಿಕ್ಕ ಮಕ್ಕಳ ತಜ್ಞ ಡಾ. ಎಂ.ಆರ್. ಕಲಿವಾಳಮಠ ಹೇಳಿದರು.

ಅವರು ಮಂಗಳವಾರ ಸಮೀಪದ ಹೂವಿನಶಿಗ್ಲಿ ವಿರಕ್ತಮಠದ ಜಾತ್ರಾ ಮಹೋತ್ಸವದ ನಿಮಿತ್ತ ಶ್ರೀಮಠದಲ್ಲಿ ಹಮ್ಮಿಕೊಂಡಿರುವ ಕೊಟ್ಟೂರು ಬಸವೇಶ್ವರ ಪುರಾಣ ಪ್ರವಚನದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಸಾನ್ನಿಧ್ಯ ವಹಿಸಿದ್ದ ಶ್ರೀಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಬದುಕಿನಲ್ಲಿ ಕೋಪ, ತಾಪ, ಪಾಪ, ಬಡತನ, ದಾರಿದ್ರ್ಯ ಶಮನವಾಗಿ ಶಾಂತಿ, ನೆಮ್ಮದಿ, ಸಮೃದ್ಧಿ, ಸಾರ್ಥಕ ಬದುಕು ನಮ್ಮದಾಗಲು ಗುರು ಕಾರುಣ್ಯ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಮಠ-ಮಾನ್ಯಗಳು, ದೇವಸ್ಥಾನಗಳಲ್ಲಿ ನಡೆಯುವ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು. ನಡೆಯುವ ಪುರಾಣ-ಪ್ರವಚನ ಕೇಳಬೇಕು. ಮಠಗಳು ಮಾಡುವ ತ್ರಿವಿಧ ದಾಸೋಹ, ಧರ್ಮ ಜಾಗೃತಿ, ಜಾತ್ರಾ ಮಹೋತ್ಸವ ಕಾರ್ಯಕ್ರಮಗಳಿಗೆ ಭಕ್ತರ ಪಾಲ್ಗೊಳ್ಳುವಿಕೆ, ಸಹಾಯ-ಸಹಕಾರ ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಶ್ರೀಮಠದಲ್ಲಿ ನಡೆಯುವ ಗುರುಕುಲ ಶಿಕ್ಷಣ ಸೇವೆ ಇತರೆಲ್ಲ ಸಮಾಜಮುಖಿ ಕಾರ್ಯಕ್ಕೆ ಸವಣೂರ ಮತ್ತು ಲಕ್ಷ್ಮೇಶ್ವರ ತಾಲೂಕಿನ ಭಕ್ತರ ಸಹಕಾರ ಸ್ಮರಣೀಯ ಎಂದರು.

ಆ.13ರಿಂದ 15ರವರೆಗೆ ನಡೆಯುವ ಜಾತ್ರಾ ಮಹೋತ್ಸವ ಕಾರ್ಯಕ್ರಮಕ್ಕೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕು. ಜ. 10ರಂದು ಗ್ರಾಮದಲ್ಲಿ ರೊಟ್ಟಿಜಾತ್ರೆ ನಡೆಯಲಿದೆ ಎಂದರು.

ಲಕ್ಷ್ಮೇಶ್ವರ ತಾಲೂಕು ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಗರಾಜ ಹಣಗಿ ಮಾತನಾಡಿ, ಹೂವಿನಶಿಗ್ಲಿ ವಿರಕ್ತಮಠ ತ್ರಿವಿಧ ದಾಸೋಹಗಳ ಸಂಗಮವಾಗಿದ್ದು ಗುರುಕುಲಕ್ಕೆ ಸರ್ಕಾರದ ಸಹಾಯಹಸ್ತದ ಅಗತ್ಯವಿದೆ ಎಂದರು.

ಪ್ರವಚನಕಾರರಾದ ರಾಚಯ್ಯ ಶಾಸ್ತ್ರಿಗಳು, ನಿಂಗಯ್ಯಸ್ವಾಮಿ ಹಿರೇಮಠ, ಶಿವಕುಮಾರ ಪುರಾಣ-ಪ್ರವಚನ ನೆರವೇರಿಸಿದರು. ಡಾ.ಶ್ರೀಕಾಂತ ಬೆಳವಿಗಿ, ಡಾ.ಪ್ರಸನ್ನ. ಕುಲಕರ್ಣಿ, ಲಕ್ಷ್ಮೇಶ್ವರ ತಾಲೂಕು ಪತ್ರಕರ್ತ ಸಂಘದ ಅಧ್ಯಕ್ಷ ಅಶೋಕ, ಆರ್.ಜಿ. ಚಿಕ್ಕಮಠ, ಪಿ.ಎಚ್. ಪಾಟೀಲ, ಗವಿಸಿದ್ದೇಶ್ವರ ಶಾಸ್ತ್ರಿಗಳು, ರೇಣುಗೌಡ ಪಾಟೀಲ, ನಿಂಗಪ್ಪ ಕಳ್ಳಿಮನಿ, ಶಿವಾನಂದ ಕಟ್ಟಿಮನಿ, ಶಾಂತಪ್ಪ ರಾಮಗೇರಿ ಅನ್ನದಾನಯ್ಯ ಹಿರೇಮಠ ಮತ್ತಿತರರು ಇದ್ದರು.

---

# ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ಗೆ ಡಿಜಿ ಭೇಟಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ಗೆ ಲಯನ್ಸ್ ಕ್ಲಬ್‌ನ ಡಿಸ್ಟ್ರಿಕ್ಟ್ ಗವರ್ನರ್ ಜಯಅಮೋಲ ನಾಯಕ್, ಕ್ಲಬ್‌ನ ಡಿಸ್ಟ್ರಿಕ್ಟ್ ಕ್ಯಾಬಿನೆಟ್ ಸೆಕ್ರೆಟರಿ ಡಾ. ಕೀರ್ತಿ ಜೆ.ನಾಯಕ, ನಿಕಟಪೂರ್ವ ಜಿಲ್ಲಾ ಗವರ್ನರ್ ಆನಂದ ಪೋತ್ನೀಸ್ ಅವರು ಮಂಗಳವಾರ ಅಧಿಕೃತ ಭೇಟಿ ನೀಡಿ ಹಲವಾರು ಸಮಾಜಮುಖಿ, ಜನಮುಖಿ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡಿದ್ದರು.

ಹುಲಕೋಟಿಯ ವೃದ್ಧಾಶ್ರಮಕ್ಕೆ ಭೇಟಿ ನೀಡಿ ಅಕ್ಕಿ, ಹಣ್ಣು-ಹಂಪಲು, ಬಟ್ಟೆ, ಸೋಲಾರ್ ಲೈಟ್ ವಿತರಿಸಿದರು. ಅರುಣೋದಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಗೆ ಭೇಟಿ ನೀಡಿ ಹಣ್ಣು-ಹಂಪಲು, ಬಟ್ಟೆ ವಿತರಿಸಿದರು.

ನಂತರ ಲಯನ್ಸ್ ಸ್ಕೂಲ್‌ಗೆ ಭೇಟಿ, ಡಿಜಿ ಬೋರ್ಡ್ ಮೀಟಿಂಗ್ ಬಳಿಕ ಬಸ್ ಶೆಲ್ಟರ್ ಉದ್ಘಾಟಿಸಿ, ನಂತರ ವೀರೇಶ್ವರ ಪುಣ್ಯಾಶ್ರಮಕ್ಕೆ ಭೇಟಿ ನೀಡಿ ಆಶ್ರಮದ ವಿದ್ಯಾರ್ಥಿಗಳಿಗೆ ಅನ್ನಸಂತರ್ಪಣೆ, ಬಟ್ಟೆ ಹಾಗೂ ಹೊದಿಕೆ ವಿತರಣೆ ನೆರವೇರಿಸಿದರು. ಸಂಜೆ ಗದಗ ಶಿವಾನಂದ ಮಠದ ಹತ್ತಿರದ ಪಾಂಜರಪೋಳದ ಗೋಶಾಲೆಗೆ ಭೇಟಿ ನೀಡಿ ಪಶು ಆಹಾರ ವಿತರಿಸಿ, ಬೆಟಗೇರಿಯ ಅಮೂಲ್ಯ ಮಕ್ಕಳ ದತ್ತು ಸ್ವೀಕಾರ ಕೇಂದ್ರಕ್ಕೆ ಭೇಟಿ ನೀಡಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ, ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಖಜಾಂಚಿ ರೇಣುಕಪ್ರಸಾದ ಹಿರೇಮಠ, ಲಯನ್ ಲೇಡಿಸ್ ಕ್ಲಬ್ ಅಧ್ಯಕ್ಷೆ ಪೂಜಾ ಪಾಟೀಲ, ಕಾರ್ಯದರ್ಶಿ ಸುರೇಖಾ ಮಲ್ಲಾಡದ, ಖಜಾಂಚಿ ಸ್ನೇಹಾ ಹಿರೇಮಠ ಸೇರಿದಂತೆ ದತ್ತು ಬೇವಿನಕಟ್ಟಿ, ರಮೇಶ ಶಿಗ್ಲಿ, ಸಾವಿತ್ರಿ ಶಿಗ್ಲಿ, ವೀಣಾ ಸುಲಾಖೆ, ಮಂಜುನಾಥ ವೀರಲಿಂಗಯ್ಯನಮಠ, ಜೆ.ಡಿ. ಉತ್ತರಕರ ಮುಂತಾದವರಿದ್ದರು.

---

ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ

# ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿಗಳ ಸಾಧನೆ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ನಡೆದ ಗದಗ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು/ಸಿಬ್ಬಂದಿಗಳು ಭಾಗವಹಿಸಿ ವಿಜೇತರಾಗಿದ್ದು, ಸಿಬ್ಬಂದಿಗಳಿಗೆ ಇಲಾಖೆಯ ಉಪನಿರ್ದೇಶಕರಾದ ಡಾ. ನಂದಾ ಹಣಬರಟ್ಟಿ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

ಡಾ. ನಂದಾ ಹಣಬರಟ್ಟಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಇವರ ಸ್ವರಚಿತ ನಾಟಕ ಗೌಡನ ಮಗಳು-ಪಾತ್ರದಾರಿಗಳು ನಂದಾ ಹಣಬರಟ್ಟಿ, ಸಿಬ್ಬಂದಿಗಳಾದ ಬಿ.ಎಸ್. ಗುಡಿ, ದೀಪಾ ಶೆಟ್ಟರ್, ಶ್ರೀಕಾಂತ, ವಸಂತಾ, ವಿದ್ಯಾ, ಸುಜಾತಾ, ರೋಹನ, ಪಾಪಣ್ಣವರ, ಧರ್ಮರಾಜ, ಪ್ರವೀಣ ಗಾಯಕರ, ಕಸ್ತೂರಿ ನರ್ತಿ ಇವರುಗಳು ಕಿರುನಾಟಕ ಸ್ಪರ್ಧೆಯಲ್ಲಿ ಭಾಗವಹಿಸಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ಡಾ. ನಂದಾ ಹಣಬರಟ್ಟಿ ಮತ್ತು ಇಲಾಖೆಯ ಸಿಬ್ಬಂದಿಗಳಾದ ಸುಜಾತಾ ಪಾಟೀಲ, ದೀಪಾ ಶೆಟ್ಟರ್, ಕಸ್ತೂತಿ ನರ್ತಿ, ಶ್ರೀಕಾಂತ ಅರಹುಣಸಿ, ಬಿ.ಎಸ್. ಗುಡಿ, ಮುತ್ತಣ್ಣ ಸಂಕನೂರ, ಎಮ್. ಎಂ. ಪಾಪನ್ನವರ ಇವರುಗಳು ಜಾನಪದ ಸಮೂಹ ಗೀತೆಯಲ್ಲಿ ಭಾಗವಹಿಸಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ಶ್ರೀಕಾಂತ ಅರಹುಣಸಿ ಭಾವಗೀತೆ ಸ್ಪರ್ಧೆಯಲ್ಲಿ ದ್ವಿತೀಯ, ಸಿದ್ದಲಿಂಗೇಶ ಯಚ್ಚಲಗಾರ ಪುರುಷರ 800 ಮೀ ಓಟದಲ್ಲಿ ದ್ವಿತೀಯ, ಸಿದ್ಧಲಿಂಗೇಶ ಯಚ್ಚಲಗಾರ ಪುರುಷರ 100 ಮೀ ಓಟದಲ್ಲಿ ತೃತೀಯ, ಪ್ರಶಾಂತ ಸಂಗ್ರೇಶಿ ಪುರುಷರ 110 ಮೀ ಅಡೆತಡೆ ಓಟದಲ್ಲಿ ಪ್ರಥಮ, ಸಿದ್ದಪ್ಪ ಮಾದರ ಪುರುಷರ 64 ಕೆಜಿ ವೇಟ್ ಲಿಫ್ಟಿಂಗ್‌ದಲ್ಲಿ ದ್ವಿತೀಯ, ಮಂಜುನಾಥ ಮಾದರ ಪುರುಷರ 67 ಕೆಜಿ ಕುಸ್ತಿಯಲ್ಲಿ ದ್ವಿತೀಯ, ಶಿವಗಂಗವ್ವ ಕಬ್ಬೇರಹಳ್ಳಿ ಮಹಿಳೆಯರ 800 ಮೀ ಓಟದಲ್ಲಿ ತೃತೀಯ, ಮಾಬುಸಾಬ ಕರಣಿ ಪುರುಷರ 83 ಕೆಜಿ ವೇಟ್ ಲಿಫ್ಟಿಂಗ್‌ನಲ್ಲಿ ದ್ವಿತೀಯ, ಸದಾಶಿಬ ಬುದ್ನಿ ಪುರುಷರ 87 ಕೆಜಿ ಕುಸ್ತಿಯಲ್ಲಿ ಪ್ರಥಮ, ವಿಶಾಲ ಹಾದಿಮನಿ, ಬಿ.ವಿ. ಬಸವರಡ್ಡಿಯವರ, ನವೀನ ಕುಮಾರ ಹರಿಜನ, ಪ್ರಶಾಂತ ಸಂಗ್ರೇಶಿ, ನೀಲಕಂಠಯ್ಯ ಎಸ್, ಮಹಮ್ಮದರಫಿ ನದಾಫ್ ಅವರು ಪುರುಷರ ಫುಟ್ಬಾಲ್‌ನಲ್ಲಿ ಪ್ರಥಮ, ಬಿ.ವಿ. ಬಸವರೆಡ್ಡಿಯವರ ಪುರುಷರ ಬಾಸ್ಕೆಟ್ ಬಾಲ್‌ನಲ್ಲಿ ಪ್ರಥಮ, ಮಂಜುಳಾ ಅರಳಿಗಿಡದ ಮಹಿಳೆಯರ ಥ್ರೋಬಾಲ್‌ನಲ್ಲಿ ಪ್ರಥಮ, ರಾಘವೇಂದ್ರ ಗೋಕಾಕ್ ಪುರುಷರ ಹಾಕಿಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ.

---

# ಮಕ್ಕಳನ್ನು ಅಂಗನವಾಡಿ ಕೇಂದ್ರಗಳಿಗೆ ಕಳಿಸಿ

▶▶ಮೊದಲನೇ ಪುಟದಿಂದ

ಪಾಲಕರು ಮಕ್ಕಳನ್ನು ಅಂಗನವಾಡಿ ಕೇಂದ್ರಗಳಿಗೆ ಕಳುಹಿಸಬೇಕು. ಗೊಜನೂರು ಗ್ರಾಮದಲ್ಲಿ ಬಹುದಿನಗಳಿಂದ ಬೇಡಿಕೆಯಲ್ಲಿದ್ದ ಅಂಗನವಾಡಿ ಕೇಂದ್ರ ಸಂಖ್ಯೆ 43ರ ನೂತನ ಕಟ್ಟಡ ಇದೀಗ ಪ್ರಾರಂಭವಾಗಿದ್ದು, ಕಟ್ಟಡದಲ್ಲಿ ಸ್ವಚ್ಛತೆ ಮಕ್ಕಳ ಸುರಕ್ಷತೆಯ ಬಗ್ಗೆ ಕಾಳಜಿ ವಹಿಸುವಂತೆ ಕರೆನೀಡಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷ ಮಂಜುನಾಥ ಕಾಳೆ, ಉಪಾಧ್ಯಕ್ಷ ಮಹಾಂತಗೌಡ ಪಾಟೀಲ, ಸಿಡಿಪಿಓ ಮೃತ್ಯುಂಜಯ ಗುಡ್ಡದನ್ವೇರಿ, ಶಿರಹಟ್ಟಿ ಬಿಜೆಪಿ ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ರಮೇಶ ದನದಮನಿ, ಚಂದ್ರಗೌಡ ಪಾಟೀಲ, ನಿಂಗನಗೌಡ ಪಾಟೀಲ್, ಮಂಜುನಾಥ ಕಣವಿ, ವೀರಭದ್ರಪ್ಪ ವಡಕಣ್ಣವರ, ಗಂಗಾಧರ ಮೆಣಸಿನಕಾಯಿ, ಶಕ್ತಿ ಕತ್ತಿ, ಭೀಮಣ್ಣ ಯಂಗಾಡಿ, ಅಂಗನವಾಡಿ ಮೇಲ್ವಿಚಾರಕಿ ಗೀತಾ ಮುಳುಗುಂದ, ಎನ್‌ಪಿಎಸ್ ನೌಕರ ಸಂಘದ ತಾಲೂಕಾಧ್ಯಕ್ಷ ಎಫ್. ಎಸ್. ತಳವಾರ, ಅಂಗನವಾಡಿ ಕಾರ್ಯಕರ್ತೆಯರಾದ ಬಸವಣೆವ್ವ ಪಾಟೀಲ್, ಸುಧಾ ಗುಂಡೆನಹಳ್ಳಿ, ಗಿರಿಜಾ ಪೂಜಾರ, ನಾಗಮ್ಮ ಮುದಗಲ್, ಮಕ್ಕಳ ಜಾಗೃತಿ ಸಂಸ್ಥೆ ಸಿಬ್ಬಂದಿಗಳಾದ ಸಂಜೀವ ರೆಡ್ಡಿ, ಕಾತುನಬಿ ಮಸೂದಿ, ಸಂಜೀವ, ಸಾವಿತ್ರಿ ಕಾಮತ ಮುಂತಾದವರಿದ್ದರು.

---


## ನಿಧನ

### ಕಳಸಪ್ಪ ಗೊರವರ



ಡಂಬಳ: ಗ್ರಾಮದ ಹಾಲುಮತ ಸಮಾಜದ ಹಿರಿಯರು ಎಲ್ ಐ ಸಿ ವಿಮಾ ಪಾಲಸಿದಾರರು ಸಮಾಜ ಸೇವಕರಾಗಿದ್ದ ಕಳಸಪ್ಪ ಮುದಕಪ್ಪ ಗೊರವರ(55) ಬುಧವಾರ ನಿಧನರಾದರು. ಪತ್ನಿ, ಪುತ್ರ, ಇಬ್ಬರು ಪುತ್ರಿಯರು, ಸಹೋದರರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಜ.8ರ ಗುರುವಾರ ಮುಂಜಾನೆ 11ಘಂಟೆಗೆ ಅಂತ್ಯಕ್ರಿಯೆ ಜರುಗಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

### ಯಲ್ಲಪ್ಪ ಬೆಟಗೇರಿ



**ಲಕ್ಷ್ಮೇಶ್ವರ:** ತಾಲೂಕಿನ ರಾಮಗೇರಿ ಗ್ರಾಮದ ಹಿರಿಯರಾದ ಯಲ್ಲಪ್ಪ ಯ.ಬೆಟಗೇರಿ (82) ಬುಧವಾರ ಸಂಜೆ ನಿಧನರಾದರು. ಮೃತರಿಗೆ ಪತ್ನಿ, ಇಬ್ಬರು ಪುತ್ರರು, ಪುತ್ರಿ ಸೇರಿ ಅಪಾರ ಬಂಧು-ಬಳಗವಿದೆ.

---

# ಇಂದಿನಿಂದ ರೈತರಿಂದ ಅನಿರ್ದಿಷ್ಟಾವಧಿ ಧರಣಿ



■ವಿಜಯಸಾಕ್ಷಿ ಸುದ್ದಿ, ಗದಗ

ರೈತರಿಗೆ ಬೆಳೆ ಪರಿಹಾರ ಸಮರ್ಪಕ ವಿತರಣೆ ಸೇರಿದಂತೆ ವಿವಿಧ ಬೇಡಿಕೆ ಈಡೇರಿಸಲು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ, ಕಿಸಾನ್ ಮೋರ್ಚಾ ಹಾಗೂ ವಿವಿಧ ಪ್ರಗತಿಪರ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಜ. 8ರಿಂದ ರೋಣ ಪಟ್ಟಣದ ತಹಸೀಲ್ದಾರ ಕಚೇರಿ ಎದುರು ಅನಿರ್ದಿಷ್ಟಾವಧಿ ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಮುತ್ತನಗೌಡ ಚೌಡರಡ್ಡಿ, ಜಿಲ್ಲಾ ಕಾರ್ಯಾಧ್ಯಕ್ಷ ಮಹಾದೇವಗೌಡ ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಪ್ರತಿಭಟನಾ ಧರಣಿ ಆರಂಭಕ್ಕೂ ಮುನ್ನ ರೋಣ ಕೃಷಿ ಮಾರುಕಟ್ಟೆಯಿಂದ ರೈತರ ಬೃಹತ್ ಮೆರವಣಿಗೆ ಮೂಲಕ ಬೆಳಿಗ್ಗೆ 11.30ಕ್ಕೆ ರೋಣ ತಾಲೂಕ ತಹಸೀಲ್ದಾರರ ಕಚೇರಿಗೆ ತೆರಳಲಾಗುತ್ತದೆ. ರೋಣ ತಹಸೀಲ್ದಾರ ಕಚೇರಿಯ ಮುಂದೆ ನಡೆಸುವ ಹೋರಾಟದಲ್ಲಿ ರೋಣ ಹಾಗೂ ಗಜೇಂದ್ರಗಡ ತಾಲೂಕಿನ ರೈತರು ಹಾಗೂ ರೈತ ಮಹಿಳೆಯರು ಭಾಗವಹಿಸಬೇಕು ಎಂದಿದ್ದಾರೆ.

ರೈತರ ಬೆಳೆಗೆ ವೈಜ್ಞಾನಿಕ ಬೆಲೆ ಸಿಗುತ್ತಿಲ್ಲ. ಬೆಳೆಯ ಬೆಲೆ ನಿರ್ಧರಿಸುವ ನಿಯಮಗಳನ್ನು ಜಾರಿ ಮಾಡಬೇಕು. ಬೆಳೆ ನಾಶವಾದಾಗಲೂ ಕೂಡ ಖಾಸಗಿ ವಿಮಾ ಕಂಪನಿಗಳ ಭ್ರಷ್ಟಚಾರದ ಫಲವಾಗಿ ಬೆಳೆವಿಮೆ ಮಾಡಿಸಿದ ರೈತರಿಗೆ ಪರಿಹಾರ ಬಾರದಂತಾಗಿದೆ. ರೈತರ ಬೆಳೆ ಪರಿಹಾರ ಸಮರ್ಪಕವಾಗಿ ವಿತರಿಸಬೇಕು. ಕಡಲೆ ಬೆಳೆಗೆ ಸಂಬಂಧಿಸಿದಂತೆ ಬೆಳೆ ಬರುವ ಪೂರ್ವದಲ್ಲಿ ಬೆಂಬಲ ಬೆಲೆ ಘೋಷಣೆ ಮಾಡಬೇಕು. ಖರೀದಿ ಕೇಂದ್ರ ಸ್ಥಾಪಿಸಬೇಕು. ಎಲ್ಲ ಬೆಳೆಗಳಿಗೆ ವಿಮಾ ಪರಿಹಾರ ಮೊತ್ತ ಶೀಘ್ರವಾಗಿ ನೀಡಬೇಕು ಎಂದು ಹೇಳಿದರು.

ರೋಣ ತಾಲೂಕು ರೈತ ಸಂಘದ ತಾಲೂಕು ಅಧ್ಯಕ್ಷ ಸಂಗಣ್ಣ ದಂಡಿನ, ರೈತ ಮುಖಂಡರಾದ ಮೇಘರಾಜ ಬಾವಿ, ಎಸ್. ಎಸ್. ಕಂಠಿ, ಸಂಗಮೇಶ ಪವಾಡಶೆಟ್ಟರ, ರಾಮಣ್ಣ ಸೂಡಿ, ದೇವಪ್ಪ ಹುನಗುಂದ, ಬಸನಗೌಡ ಮಂಗಳೂರು, ಸೇರಿದಂತ ಜಿಲ್ಲೆಯ ವಿವಿಧ ಭಾಗದ ರೈತರು ಭಾಗವಹಿಸಲಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ.

## ಮಾಸಾಶನ ಪಡೆಯುತ್ತಿರುವ ಮಾಜಿ ಕುಸ್ತಿ/ ಕ್ರೀಡಾಪಟುಗಳು ಪ್ರಮಾಣ ಪತ್ರ ಸಲ್ಲಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ರಾಜ್ಯ, ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿ ವಿಜೇತರಾದ ಮಾಜಿ ಕುಸ್ತಿ/ಕ್ರೀಡಾಪಟುಗಳಿಗೆ ಮಾಸಾಶನವನ್ನು ನೀಡಲಾಗುತ್ತಿದೆ. ಸದರಿ ಮಾಸಾಶನದಾರರು ತಮ್ಮ 02 ಪಾಸ್‌ಪೋರ್ಟ್ ಸೈಜ್ ಫೋಟೋ ಮತ್ತು ಆಧಾರ್ ಕಾರ್ಡ್‌ಗಳನ್ನು ಖುದ್ದಾಗಿ ಮಾಸಾಶನದಾರರೆ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ ಗದಗ ಇಲ್ಲಿ ಜನವರಿ-2026 ಅಂತ್ಯದೊಳಗಾಗಿ ಸಲ್ಲಿಸಬಹುದು. ಒಂದು ವೇಳೆ ಸಲ್ಲಿಸದೇ ಇದ್ದಲ್ಲಿ ತಮಗೆ ನೀಡುತ್ತಿರುವ ಮಾಸಾಶನವನ್ನು ತಡೆಹಿಡಿಯಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೇವೇಂದ್ರಪ್ಪ ಗಡಾದ, ದೂರವಾಣಿ ಸಂಖ್ಯೆ 9845117049 ಗೆ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಪ್ರತಿ ವರ್ಷದಂತೆ ಈ ವರ್ಷವೂ ಜನವರಿ 14 ರಂದು ಆಚರಿಸಲಾಗುವ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ನಿಮಿತ್ತ ಜನವರಿ 08 ರಂದು ಗುರುವಾರ ಮುಂಜಾನೆ 11 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ. ಹಾಗೂ ಜನವರಿ 19 ರಂದು ಆಚರಿಸಲಾಗುವ ಮಹಾಯೋಗಿ ವೇಮನರ ಜಯಂತಿ ನಿಮಿತ್ತ ಮಧ್ಯಾಹ್ನ 12 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಸವರಾಜ ವ್ಹಿ.ಬಳ್ಳಾರಿ ತಿಳಿಸಿದ್ದಾರೆ.

**ಬಾಕಿ ಇರುವ ಜಿಲ್ಲೆಗಳಲ್ಲಿ ಹಂತ ಹಂತವಾಗಿ ವೈದ್ಯಕೀಯ ಕಾಲೇಜು, ಟ್ರಾಮಾ ಸೆಂಟರ್ ಸ್ಥಾಪನೆ | ಹಾವೇರಿಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಸ್ಥಾಪನೆ**

# ರಾಜ್ಯ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿಲ್ಲ

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಉತ್ತರ ಕರ್ನಾಟಕದ ಹೆಬ್ಬಾಗಿಲು ಎನಿಸಿಕೊಂಡಿರುವ ಹಾವೇರಿ ಜಿಲ್ಲೆಯಲ್ಲಿ ಕ್ಯಾನ್ಸರ್, ಟ್ರಾಮಾ ಸೆಂಟರ್ ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಸ್ಥಾಪಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಅವರು ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ವೈದ್ಯಕೀಯ ಶಿಕ್ಷಣ ಇಲಾಖೆ ಹಾಗೂ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಹಾವೇರಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಉದ್ಘಾಟನೆ, ವಿವಿಧ ಇಲಾಖೆಗಳ ಕಾಮಗಾರಿಗಳ ಉದ್ಘಾಟನೆ ಮತ್ತು ಶಿಲಾನ್ಯಾಸ ನೆರವೇರಿಸಿ ಮಾತನಾಡಿದರು.

ಕಳೆದ ಬಾರಿ ಮುಖ್ಯಮಂತ್ರಿ ಆಗಿದ್ದ ಸಂದರ್ಭದಲ್ಲಿ ಹಾವೇರಿ ವೈದ್ಯಕೀಯ ವಿಜ್ಞಾನ ಸಂಸ್ಥೆಯನ್ನು ಘೋಷಿಸಿದ್ದೆ. ಉಪಮುಖ್ಯ ಮಂತ್ರಿಯಾಗಿದ್ದಾಗ ಪ್ರತಿ ಜಿಲ್ಲೆಯಲ್ಲಿ



ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡಬೇಕು ಎಂದು ಘೋಷಣೆ ಮಾಡಿದ್ದೆ. ಕರ್ನಾಟಕದಲ್ಲಿ ಇಂದು ಸುಮಾರು 71 ವೈದ್ಯಕೀಯ ಕಾಲೇಜುಗಳಿದ್ದು, ಈ ಪೈಕಿ 22 ಸರ್ಕಾರಿ ವೈದ್ಯಕೀಯ ಕಾಲೇಜುಗಳಿವೆ. ವಿಜಯಪುರ ಜಿಲ್ಲೆ ಸೇರಿದಂತೆ ಉಳಿದ ಜಿಲ್ಲೆಗಳಲ್ಲಿಯೂ ಹಂತ ಹಂತವಾಗಿ ವೈದ್ಯಕೀಯ ಕಾಲೇಜುಗಳು, ಟ್ರಾಮಾ ಸೆಂಟರ್ ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಸ್ಥಾಪಿಸಲಾಗುವುದು ಎಂದು ಮುಖ್ಯಮಂತ್ರಿಗಳು ಭರವಸೆ ನೀಡಿದರು.

ನಮ್ಮ ಸಮಾಜದಲ್ಲಿ ಬಡವರೇ ಹೆಚ್ಚಾಗಿದ್ದು, ಬಡವರೆಲ್ಲರೂ ಸರ್ಕಾರಿ ಆಸ್ಪತ್ರೆಗಳನ್ನು ಅವಲಂಬಿಸಿದ್ದಾರೆ. ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಬಹಳ ದುಬಾರಿ. ದುಬಾರಿ ಚಿಕಿತ್ಸೆಯನ್ನು ಸಾಮಾನ್ಯ ಜನರು ಭರಿಸುವುದು ಕಷ್ಟ. ಸ್ಥಳೀಯವಾಗಿ ಆರೋಗ್ಯ ಸೇವೆ ನೀಡಬೇಕಾದರೆ ಪ್ರತಿ ಜಿಲ್ಲೆಯಲ್ಲಿ ಒಂದು ವೈದ್ಯಕೀಯ ಕಾಲೇಜು-ಆಸ್ಪತ್ರೆ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಕ್ಯಾನ್ಸರ್ ಆಸ್ಪತ್ರೆ, ಟ್ರಾಮಾ ಸೆಂಟರ್ ಇರಲೇಬೇಕು ಎಂದರು.

ನಮ್ಮದು ಎಲ್ಲರನ್ನೂ ಒಳಗೊಂಡಿರುವ ಸರ್ಕಾರ. ಯಾವುದೇ ಧರ್ಮ, ಜಾತಿ, ಪಕ್ಷಕ್ಕೆ ಸೇರಿದವರಾಗಿದ್ದರೂ ಅವರನ್ನು ಭೇದ-ಭಾವವಿಲ್ಲದೆ, ಸೀಮಾತೀತವಾಗಿ ಕಾಣುತ್ತೇವೆ. ಎಲ್ಲ ಜಾತಿ, ಧರ್ಮ, ಪಕ್ಷಗಳಿಗೆ ಸೇರಿದ ಬಡವರಿಗೆ ನಮ್ಮ ಗ್ಯಾರಂಟಿ ಯೋಜನೆಗಳು ತಲುಪುತ್ತಿವೆ. ಬಡವರಿಗೆ ಆರ್ಥಿಕ, ಸಾಮಾಜಿಕ ಶಕ್ತಿ ತುಂಬುವುದು ಇಂದಿನ ಅಗತ್ಯವಾಗಿದ್ದು, ಸಂವಿಧಾನದಲ್ಲಿ ಜಾತಿ, ವರ್ಗ ರಹಿತವಾದ ಸಮಾಜ ನಿರ್ಮಾಣ ಮಾಡಬೇಕು ಎಂದು ಸ್ಪಷ್ಟವಾಗಿ ಹೇಳಿದೆ. ಕಟ್ಟಕಡೆಯ ಮನುಷ್ಯನಿಗೂ ಆರ್ಥಿಕ, ಸಾಮಾಜಿಕ ಸೌಲಭ್ಯ ದೊರಕಬೇಕು. ಆಗ ಮಾತ್ರ ಸಂವಿಧಾನದ ಆಶಯವಾದ ಜಾತ್ಯತೀತ ಸಮಾಜವನ್ನು ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ. ಇದನ್ನು ನಮ್ಮ ಸರ್ಕಾರ ಚಾಚೂ ತಪ್ಪದೇ ಮಾಡುತ್ತಿದೆ ಎಂದರು.

ಜನರು ತಪ್ಪು ತಿಳಿದುಕೊಳ್ಳುವ ರೀತಿಯಲ್ಲಿ ಅಪಪ್ರಚಾರವಾಗುತ್ತಿದೆ. ರಾಜ್ಯ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿಲ್ಲ ಎಂದು ಸ್ಪಷ್ಟಪಡಿಸಿದ ಮುಖ್ಯಮಂತ್ರಿಗಳು, ಹಾವೇರಿಯಲ್ಲಿ ಕರ್ನಾಟಕ ಪಬ್ಲಿಕ್ ಶಾಲೆ ಕಟ್ಟಡ, ಪ್ರವಾಸಿ ಮಂದಿರ, ವಾಲ್ಮೀಕಿ ಭವನ, ನೂತನ ಗ್ರಂಥಾಲಯ, ಜಿಲ್ಲಾ ಸಾರ್ವಜನಿಕ ಆಸ್ಪತ್ರೆ 250ರಿಂದ 500 ಹಾಸಿಗೆಗಳ ಆಸ್ಪತ್ರೆಗೆ ಮೇಲ್ದರ್ಜೆಗೆ ಏರಿಸಲಾಗಿದೆ. ಹಾವೇರಿ ವೈದ್ಯಕೀಯ ಕಾಲೇಜಿಗೆ ಸುಮಾರು 500 ಕೋಟಿ ರೂ ವೆಚ್ಚ ಮಾಡಲಾಗಿದೆ. ಇದರಲ್ಲಿ ಕೇಂದ್ರ ಸರ್ಕಾರ 194 ಕೋಟಿ ನೀಡಿದ್ದು, 300 ಕೋಟಿಗೂ ಹೆಚ್ಚು ಅನುದಾನವನ್ನು ರಾಜ್ಯ ಸರ್ಕಾರ ಭರಿಸಿದೆ ಎಂದರು.

> ಬುದ್ಧ, ಬಸವ, ಅಂಬೇಡ್ಕರ್, ಗಾಂಧಿ, ಕನಕದಾಸರು, ನಾರಾಯಣಗುರುಗಳು ಹಾಕಿಕೊಟ್ಟ ಮಾರ್ಗದಲ್ಲಿ ನಮ್ಮ ಸರ್ಕಾರ ನಡೆಯುತ್ತಿದೆ. ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಲಾಗಿದೆ. ಜಾತಿ ವಿನಾಶ, ಕಂದಾಚಾರ, ಮೌಢ್ಯ ತೊಲಗಬೇಕೆಂದು ಬಸವಣ್ಣನವರು ಹೇಳಿದ್ದಾರೆ. ವೈಚಾರಿಕತೆ, ವೈಜ್ಞಾನಿಕ ಚಿಂತನೆ ಎಲ್ಲರಲ್ಲಿ ಬಂದಾಗ ಮಾತ್ರ ಜಾತ್ಯತೀಯ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ. ಈ ದಿಸೆಯಲ್ಲಿ ನಮ್ಮ ಸರ್ಕಾರ ನಡೆಯುತ್ತಿದೆ. ಹಾವೇರಿ ಜಿಲ್ಲೆಯನ್ನು ಮಾದರಿ ಜಿಲ್ಲೆಯಾಗಿಸಲು ಸರ್ಕಾರ ಎಲ್ಲಾ ಪ್ರಯತ್ನ ಮಾಡಲಿದೆ.
>
> **- ಸಿದ್ದರಾಮಯ್ಯ.**
> ಮುಖ್ಯಮಂತ್ರಿಗಳು.

## ಬಿಜೆಪಿಯೊಂದಿಗೆ ಕೈಜೋಡಿಸಿದ ಗೌಡರೊಂದಿಗಿನ ಸಂಬಂಧ ಕಡಿದುಕೊಳ್ಳಲು ನಿರ್ಧರಿಸಿದ ಕೇರಳ ಜೆಡಿಎಸ್; ಹೊಸ ಪಕ್ಷದೊಂದಿಗೆ ವಿಲೀನ

■ವಿಜಯಸಾಕ್ಷಿ ಸುದ್ದಿ, ಕೇರಳ

ಜನತಾ ದಳ (ಜಾತ್ಯತೀತ) ದ ಕೇರಳ ಘಟಕವು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ನೇತೃತ್ವದ ರಾಷ್ಟ್ರೀಯ ನಾಯಕತ್ವದೊಂದಿಗೆ ಸಂಬಂಧವನ್ನು ಕಡಿದುಕೊಂಡು ಹೊಸ ರಾಜಕೀಯ ಪಕ್ಷದೊಂದಿಗೆ ವಿಲೀನಗೊಳ್ಳಲು ನಿರ್ಧರಿಸಿದೆ.

ಈ ನಿರ್ಧಾರದ ಕುರಿತು ಶೀಘ್ರದಲ್ಲೇ ಅಧಿಕೃತ ಘೋಷಣೆ ಹೊರಬೀಳುವ ನಿರೀಕ್ಷೆಯಿದೆ ಎಂದು ಸ್ಥಳೀಯ ಕೇರಳ ಸ್ಥಳೀಯ ಮಾಧ್ಯಮಗಳು ಮೂಲಗಳನ್ನು ಉಲ್ಲೇಖಿಸಿ ವರದಿ ಮಾಡಿವೆ. ಪಕ್ಷದ ಮೂಲಗಳ ಪ್ರಕಾರ, ರಾಜ್ಯ ಘಟಕವು ಈಗಾಗಲೇ ಭಾರತ ಚುನಾವಣಾ ಆಯೋಗದಲ್ಲಿ ನೋಂದಾಯಿಸಲಾದ ಪಕ್ಷದೊಂದಿಗೆ ವಿಲೀನಗೊಳ್ಳಲು ಯೋಜಿಸಿದೆ. ಈ ತಂತ್ರವು ಸಂವಿಧಾನದ ಹತ್ತನೇ ಶೆಡ್ಯೂಲ್ ಅನ್ನು ಅನುಸರಿಸಲು ರಚಿಸಲಾಗಿದೆ. ಇದು ಶಾಸಕಾಂಗ ಪಕ್ಷದ ಸದಸ್ಯರಲ್ಲಿ ಕನಿಷ್ಠ ಮೂರನೇ ಎರಡರಷ್ಟು ಸದಸ್ಯರು ವಿಲೀನಕ್ಕೆ ಒಪ್ಪಿದರೆ ಅವರನ್ನು ಅನರ್ಹತೆಯಿಂದ ರಕ್ಷಿಸುತ್ತದೆ.



ಪ್ರಸ್ತುತ, ಕೇರಳ ವಿಧಾನಸಭೆಯಲ್ಲಿ ಜೆಡಿ(ಎಸ್) ಇಬ್ಬರು ಪ್ರತಿನಿಧಿಗಳನ್ನು ಹೊಂದಿದೆ. ತಿರುವಲ್ಲ ಶಾಸಕ ಮ್ಯಾಥ್ಯೂ ಟಿ. ಥಾಮಸ್ ಮತ್ತು ಚಿತ್ತೂರು ಪ್ರತಿನಿಧಿಸುವ ರಾಜ್ಯ ವಿದ್ಯುತ್ ಸಚಿವ ಕೆ. ಕೃಷ್ಣನ್‌ಕುಟ್ಟಿ. ಇಬ್ಬರೂ ಶಾಸಕರು ಸಹಮತ ಹೊಂದಿರುವುದರಿಂದ, ಪಕ್ಷಾಂತರ ವಿರೋಧಿ ಕಾನೂನಿನಡಿಯಲ್ಲಿ ಅನರ್ಹತೆಯನ್ನು ತಪ್ಪಿಸಲು ಅವರು ಸಾಂವಿಧಾನಿಕ ಅವಶ್ಯಕತೆಗಳನ್ನು ಪೂರೈಸಬೇಕಾಗುತ್ತದೆ.

ಏಪ್ರಿಲ್‌ನಲ್ಲಿ ನಿರೀಕ್ಷಿತ ವಿಧಾನಸಭಾ ಚುನಾವಣೆಗೆ ರಾಜ್ಯವು ಸಿದ್ಧವಾಗುತ್ತಿರುವಾಗ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಆಡಳಿತಾರೂಢ ಸಿಪಿಐ(ಎಂ) ನೇತೃತ್ವದ ಎಲ್‌ಡಿಎಫ್‌ನ ಭಾಗವಾಗಿರುವ ರಾಜ್ಯ ಘಟಕವು ವಿರೋಧ ಪಕ್ಷ ಕಾಂಗ್ರೆಸ್ ನೇತೃತ್ವದ ಯುಡಿಎಫ್‌ನಿಂದ ನಿರಂತರ ಟೀಕೆಗಳನ್ನು ಎದುರಿಸುತ್ತಿದೆ. ವಿಶೇಷವಾಗಿ ಎಚ್‌ಡಿ ಕುಮಾರಸ್ವಾಮಿ ಕೇಂದ್ರ ಸಚಿವ ಸಂಪುಟಕ್ಕೆ ಸೇರಿದ ನಂತರ, ಬಿಜೆಪಿ ನೇತೃತ್ವದ ಎನ್‌ಡಿಎಯ ಭಾಗವಾಗಿರುವ ರಾಷ್ಟ್ರೀಯ ನಾಯಕತ್ವದ ಸಮ್ಮಿಶ್ರ ಪಾಲುದಾರನನ್ನು ಎಲ್‌ಡಿಎಫ್ ಉಳಿಸಿಕೊಳ್ಳುವ ಔಚಿತ್ಯವನ್ನು ವಿರೋಧ ಪಕ್ಷವು ಆಗಾಗ್ಗೆ ಪ್ರಶ್ನಿಸುತ್ತಿದೆ. ಈ ಔಪಚಾರಿಕ ವಿಭಜನೆಯು ಅಂತಿಮವಾಗಿ ಪಕ್ಷವನ್ನು ಎನ್‌ಡಿಎ ಗುರುತಿನಿಂದ ಪ್ರತ್ಯೇಕಿಸುತ್ತದೆ. ಎಡ ಒಕ್ಕೂಟದೊಳಗಿನ ರಾಜಕೀಯ ಮುಜುಗರವನ್ನು ಕೊನೆಗೊಳಿಸುತ್ತದೆ ಎಂದು ರಾಜ್ಯ ನಾಯಕತ್ವ ನಂಬುತ್ತದೆ.

**ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ ಹಿಂದೂ ಸಂಘಟನೆಗಳ ಮುಖಂಡ ರಾಜೂ ಖಾನಪ್ಪನವರ**

# ಪಿಎಸ್‌ಐ ರಿತ್ತಿಯವರನ್ನು ಕೂಡಲೇ ಅಮಾನತುಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರಕಾರ ಬಳ್ಳಾರಿ ಪೊಲೀಸರಿಗೊಂದು ನ್ಯಾಯ, ಗದಗ ಜಿಲ್ಲೆಯ ಪೊಲೀಸರಿಗೊಂದು ನ್ಯಾಯ ಮಾಡುತ್ತಿದೆಯೆಂದು ಹಿಂದೂ ಸಂಘಟನೆಗಳ ಮುಖಂಡ ರಾಜೂ ಖಾನಪ್ಪನವರ ಆರೋಪಿಸಿದರು.

ಗದಗ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರು, ರಾಷ್ಟ್ರಪತಿಗಳಿಗೆ ರಾಜ್ಯ ಸರಕಾರದ ವೈಫಲ್ಯ ಹಾಗೂ ಇಬ್ಬಂದಿ ನೀತಿಯನ್ನು ಖಂಡಿಸಿ ಮನವಿ ಸಲ್ಲಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ರಾಜ್ಯ ಕಾಂಗ್ರೆಸ್ ಸರ್ಕಾರ ಎಲ್ಲ ರಂಗಗಳಲ್ಲಿಯೂ ವಿಫಲವಾಗಿದೆ. ಸರಕಾರ ಅಧಿಕಾರಿಗಳ ಮೇಲೆ ನಿಯಂತ್ರಣ ಕಳೆದುಕೊಂಡಿದೆ. ಕೆಲವೆಡೆ ಸರಕಾರ ನಾಮಕಾವಾಸ್ತೆ ಅಧಿಕಾರಿಯ ಮೇಲೆ ಕ್ರಮ ಕೈಗೊಂಡಂತೆ ನಾಟಕವಾಡಿ ತನ್ನ ವೈಫಲ್ಯವನ್ನು ಮರೆಮಾಚುತ್ತಿದೆಯೆಂದು ಆರೋಪಿಸಿದರು.

ಗಣಿನಾಡು ಬಳ್ಳಾರಿಯಲ್ಲಿ ಬ್ಯಾನರ್ ವಿಷಯಕ್ಕೆ ಸಂಬಂಧಿಸಿದಂತೆ ಶಾಸಕ ನಾ.ರಾ. ಭರತ್‌ರೆಡ್ಡಿ ಅಂಗರಕ್ಷನಿಂದಲೇ ಹತ್ಯೆಗೀಡಾದ ಕಾಂಗ್ರೆಸ್ ಕಾರ್ಯಕರ್ತನ ಹತ್ಯೆಗೆ ಸಂಬಂಧಿಸಿದಂತೆ ಅಂದೇ ಕರ್ತವ್ಯಕ್ಕೆ ಹಾಜರಾಗಿದ್ದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪವನ ನೆಜ್ಜೂರರನ್ನು ಸೇವೆಯಿಂದ ಅಮಾನತ್‌ಗೊಳಿಸಲಾಗಿದೆ. ಈ ಪ್ರಕರಣದಲ್ಲಿ ಬಳ್ಳಾರಿ ಶಾಸಕ ನಾ.ರಾ. ಭರತ್‌ರೆಡ್ಡಿಯನ್ನು ಸಂತುಷ್ಟಗೊಳಿಸಲು ಸರಕಾರ ಪ್ರಯತ್ನಿಸಿದೆಯೆಂದು ಆರೋಪಿಸಿದರು. ಬೆಂಗಳೂರಿನಲ್ಲಿ ಶಾಂತಿಯುತವಾಗಿ ಓಂ ಶಕ್ತಿ ಮಾಲಾಧಾರಿಗಳು ನಡೆಸುತ್ತಿದ್ದ ಮೆರವಣಿಗೆಯ ಮೇಲೆ ದುಷ್ಟ ಮುಸ್ಲಿಂ ಮತಾಂಧರು ಕಲ್ಲೆಸೆದು ಗಲಭೆ ಸೃಷ್ಟಿಸಲು ಪ್ರಯತ್ನಿಸಿದ ಪ್ರಕರಣದಲ್ಲಿಯೂ ಸಹ ಇದುವರೆಗೆ ಯಾವದೇ ವ್ಯಕ್ತಿ, ಸಂಘಟನೆಯ ಮೇಲೆ ಪ್ರಕರಣ ದಾಖಲಿಸುವದಾಗಲಿ, ಗಲಭೆಗೆ ಪ್ರಯತ್ನಿಸಿದವರನ್ನು ಬಂಧಿಸುವದಾಗಲಿ ನಡೆದಿಲ್ಲ. ಇದು ಕಾಂಗ್ರೆಸ್ ಸರಕಾರದ ದುರಾಡಳಿತ, ಮುಸ್ಲಿಮರ ತುಷ್ಟೀಕರಣವನ್ನು ತೆ-ಋರುತ್ತದೆಯೆಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಮಹೇಶ್ ರೋಖಡೆ, ಹುಲಿಗೆಪ್ಪ ವಾಲ್ಮೀಕಿ, ಬಸವರಾಜ್ ಕುರ್ತಕೊಟ್ಟಿ, ಈಶ್ವರ್ ಕಾಟವಾ, ಕುಮಾರ್ ನಡಗೇರಿ, ವೆಂಕಟೇಶ್ ದೊಡ್ಡಮನಿ, ಭರತ ಲದ್ದಿ, ಈರಣ್ಣ ಪೂಜಾರ, ಎಸ್.ಪಿ. ಕಾಳೆ, ಕಿರಣ್ ಹಿರೇಮಠ, ಸತೀಶ್ ಕುಂಬಾರ್, ಮುದುಕಪ್ಪ ದೊಡ್ಡಮನಿ, ಬಸವರಾಜ್ ಬನ್ನಿಮರದ, ಅಭಿಲಾಷ್ ಗುಜ್ಜಾಗಡಿ, ಸಂಜು ಚಟ್ಟಿ, ಕೃಷ್ಣ ಹುಯಿಲಗೋಳ, ಮಹಾಬಲೇಶ್ವರ ಶೆಟ್ಟರ್, ಮೌನೇಶ್ ದಾಸರ್, ಈರಪ್ಪ ವಾಲ್ಮೀಕಿ, ರಾಜು ಗದ್ದಿ, ಮಂಜು ಗುಡಿಮನಿ, ಈರಣ್ಣ ಗಾಣಿಗೇರ್ ಮುಂತಾದವರಿದ್ದರು.



> ಈ ಹಿನ್ನೆಲೆಯಲ್ಲಿ, ಜಮೀನಿನಲ್ಲಿ ಕೃಷಿ ಚಟುವಟಿಕೆ ಮುಗಿಸಿ ಮನೆಗೆ ತೆರಳುತ್ತಿದ್ದ ಮುಗ್ಧ ರೈತನ ಮೇಲೆ ಮಾರಣಾಂತಿಕವಾಗಿ ಹಲ್ಲೆ ನಡೆಸಿ 32 ಸಾವಿರ ರೂಪಾಯಿಗಳನ್ನು ಲೂಟಿ ಮಾಡಿದ ಶಿರಹಟ್ಟಿ ಪೊಲೀಸ್ ಠಾಣೆಯ ಪಿಎಸ್‌ಐ ಈರಪ್ಪ ರಿತ್ತಿ ಮೇಲೆ ಇದುವರೆಗೂ ಯಾವದೇ ಕ್ರಮ ಜರುಗಿಸದಿರುವದು ಅತ್ಯಂತ ವಿಷಾದನೀಯ. ಪಿಎಸ್‌ಐ ಈರಣ್ಣ ರಿತ್ತಿಯನ್ನು ಸರಕಾರ ಕೂಡಲೇ ಅಮಾನತ್‌ಗೊಳಿಸಬೇಕು. ಬೆಂಗಳೂರಿನಲ್ಲಿ ಓಂ ಶಕ್ತಿ ಮಾಲಾಧಾರಿಗಳ ಮೆರವಣಿಯ ಮೇಲೆ ಕಲ್ಲೇಸೆದ ದುಷ್ಕರ್ಮಿಗಳ ಮೇಲೆ ಪ್ರಕರಣ ದಾಖಲಿಸಿ ದುಷ್ಕರ್ಮಿಗಳನ್ನು ಜೈಲಿಗೆ ಅಟ್ಟಬೇಕೆಂದು ರಾಜು ಖಾನಪ್ಪನವರ ಆಗ್ರಹಿಸಿದರು.

**ಸಿಎಂ ಸಿದ್ದರಾಮಯ್ಯರ ದೀರ್ಘಾವದಿ ಆಡಳಿತ; ಅಭಿಮಾನಿಗಳಿಂದ ಶ್ರೀ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯದಲ್ಲಿ ಪ್ರಸಾದ ಸೇವೆ**

# ಅಂದು ದೇವರಾಜ ಅರಸು, ಇಂದು ಸಿದ್ದರಾಮಯ್ಯ




■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ರಾಜಕೀಯದ ಏಳು-ಬೀಳಿನ ಮೇಲಾಟದಲ್ಲಿ ನಮ್ಮ ಕರ್ನಾಟಕ ರಾಜ್ಯದಲ್ಲಿ ಏಳೂವರೆ ವರ್ಷಗಳಷ್ಟು ದೀರ್ಘಾವಧಿಗೆ ಕೇವಲ ಇಬ್ಬರು ಪೂರ್ಣಾವಧಿ ಮುಖ್ಯಮಂತ್ರಿಗಳು ಆಡಳಿತ ನಡೆಸಲು ಅವಕಾಶ ನೀಡಿದೆ. ಅವರಲ್ಲಿ ಒಬ್ಬರು ಹಿಂದುಳಿದ ಸಮುದಾಯದ ಮೊದಲ ಮುಖ್ಯಮಂತ್ರಿ ಎಂಬ ಹೆಗ್ಗಳಿಕೆಯ ಡಿ.ದೇವರಾಜ ಅರಸುರವರಾದರೆ, ಇನ್ನೊಬ್ಬರು ಪ್ರಸ್ತುತ ಮುಖ್ಯಮಂತ್ರಿಗಳಾಗಿ 2792 ದಿನಗಳನ್ನು ದಾಟಿ ಸುದೀರ್ಘ ಅವಧಿಯ ಮುಖ್ಯಮಂತ್ರಿಯಾಗಿ ದಾಖಲಾರ್ಹ ಆಡಳಿತ ನೀಡುತ್ತಿರುವ ಸಿದ್ಧರಾಮಯ್ಯನವರಾಗಿದ್ದಾರೆ ಎಂದು ಸಿದ್ದರಾಮಯ್ಯ ಅಭಿಮಾನಿ ಬಳಗದ ಸಂಚಾಲಕ ಕೆ.ಬಿ. ಕಂಬಳಿ ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದಲ್ಲಿ ದೀರ್ಘಾವದಿ ಆಡಳಿತ ನಡೆಸಿದ ಹಿನ್ನೆಲೆಯಲ್ಲಿ ನಗರದ ಶ್ರೀ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯದಲ್ಲಿ ಸಿದ್ದರಾಮಯ್ಯ ಅಭಿಮಾನಿ ಬಳಗದ ವತಿಯಿಂದ ಹಮ್ಮಿಕೊಂಡ 1755ನೇ ದಿನದ ಪ್ರಸಾದ ಸೇವೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಸ್ನೇಹ-ಸಂಬಂಧಗಳಿಗೆ, ಪ್ರೀತಿ ವಾತ್ಸಲ್ಯಗಳಿಗೆ ಸೋಲುವ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಕೆಲವರ ದೃಷ್ಟಿಯಲ್ಲಿ ಹಠಮಾರಿ, ಒರಟರಂತೆ ಕಂಡರೂ ಕೂಡ ಅವರನ್ನು ಹತ್ತಿರದಿಂದ ಬಲ್ಲವರು ಅವರ ನಿಷ್ಕಲ್ಮಷ, ನಿಷ್ಕಪಟ ನುಡಿಗಳನ್ನು ಮೆಚ್ಚಿಕೊಳ್ಳುತ್ತಾರೆ. ಇದರಿಂದಾಗಿ ಅವರ ಸ್ನೇಹ ಬಳಗ ಮತ್ತು ಅಭಿಮಾನಿ ಸಂಘಟನೆಗಳು ಅವರ ಬೆನ್ನಿಗೆ ಗಟ್ಟಿಯಾಗಿ ನಿಂತಿವೆ. ರಾಜಕೀಯವಾಗಿ ಅವರನ್ನು ಟೀಕಿಸುವ ವಿರೋಧಿಗಳು ಕೂಡ ವ್ಯಕ್ತಿಗತವಾಗಿ ಅವರನ್ನು ಗೌರವಿಸುತ್ತಾರೆ ಎಂದು ಹೇಳಿದರು. ಪ್ರೊ. ಮಾರುತಿ ಮಡ್ಡಿ ಮಾತನಾಡಿ, ಸಿದ್ದರಾಮಯ್ಯನವರು ಆರ್ಥಿಕವಾಗಿಯೂ ಸದೃಢವಿಲ್ಲದ, ಸಾಂಪ್ರದಾಯಿಕ ಶಿಕ್ಷಣವನ್ನು ಪ್ರಾರಂಭದಲ್ಲಿ ಸರಿಯಾಗಿ ಪಡೆಯಲಾಗದ, ಹಿಂದುಳಿದ ಸಮುದಾಯದ, ಸೌಲಭ್ಯಗಳಿಲ್ಲದ ಕುಗ್ರಾಮದಲ್ಲಿ ಜನಿಸಿ ಇಂದು ರಾಷ್ಟ್ರಮಟ್ಟದಲ್ಲಿ ಹೆಸರು ಮಾಡಿದ್ದಾರೆ. ಅವರು ರಾಜಕೀಯದಲ್ಲಿ ಬೆಳೆದುಬಂದ ರೀತಿ ಅತ್ಯಂತ ರೋಚಕ ಮತ್ತು ರೋಮಾಂಚನಕಾರಿಯಾಗಿದೆ. ಅಂದಿನ ರಾಮಕೃಷ್ಣ ಹೆಗಡೆಯವರ ಸರಕಾರದಲ್ಲಿ ಕನ್ನಡ ಕಾವಲು ಸಮಿತಿ ಅಧ್ಯಕ್ಷರಾಗಿ, ನಂತರ ರೇಷ್ಮೆ ಖಾತೆ ಸಚಿವರಾಗಿ ಸೇವೆ ಸಲ್ಲಿಸಿದರು. ಮತ್ತೆ 1985ರಲ್ಲಿ ಜನತಾ ಪಕ್ಷದ ಅಭ್ಯರ್ಥಿಯಾಗಿ ಗೆದ್ದು ಎಸ್.ಆರ್. ಬೊಮ್ಮಾಯಿ ಸರಕಾರದಲ್ಲಿ ಸಾರಿಗೆ ಮಂತ್ರಿಗಳಾದರು ಎಂದರು.

ಈ ಸಂದರ್ಭದಲ್ಲಿ ಎಸ್.ಆರ್. ರೊಳ್ಳಿ, ನಿವೃತ್ತ ಶಿಕ್ಷಕ ಎಸ್.ಎಸ್. ಕರಡಿ, ಶ್ರೀ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯದ ಗೌರವಾಧ್ಯಕ್ಷರಾದ ಎಸ್.ಎಸ್. ಕಳಸಾಪೂರಶೆಟ್ರ, ಉಪಾಧ್ಯಕ್ಷರಾದ ಉಮೇಶ ಪೂಜಾರ, ಸದಸ್ಯರಾದ ರಾಜಣ್ಣ ಮಲ್ಲಾಡದ, ಮುತ್ತು ಜಡಿ, ಹಿರಿಯರಾದ ಗುರುಮೂರ್ತಿ ಮರಿಗುದ್ದಿ, ಸಿದ್ದರಾಮಯ್ಯ ಅಭಿಮಾನಿ ಬಳಗದವರಾದ ವಿ.ವೈ. ಮಕ್ಕಣ್ಣವರ, ನಾಗಪ್ಪ ಗುಗ್ಗರಿ, ಡಾ. ಎಸ್.ಎ. ಜಕಬಾಳ, ಡಾ. ಶರಣಬಸವ ವೆಂಕಟಾಪೂರ, ಪ್ರೊ. ಬಿ.ಎಸ್. ಕಂಠಿ, ಪ್ರೊ. ಎಂ.ಸಿ. ವಗ್ಗಿ, ಚೆನ್ನಮ್ಮ ಹುಳಕಣ್ಣವರ, ಹುಚ್ಚಣ್ಣ ಶಹಪೂರ, ಬಿ.ಬಿ. ಭಾವಿಕಟ್ಟಿ, ಎಸ್.ಎಸ್. ಕರಡಿ, ಉಮೇಶ ಹಡಪದ, ಸುಭಾಷ ಪರಸನಾಯ್ಕರ್, ಶಿವಣ್ಣ ಶಿಂಗಟಾಲಕೇರಿ, ಯಲ್ಲಪ್ಪ ಗುರಿಕಾರ, ಬಸವರಾಜ ಮಡ್ಡಿ ಮುಂತಾದವರು ಉಪಸ್ಥಿತರಿದ್ದರು.

> ಇತಿಹಾಸದಲ್ಲಿಯೇ ಮೊದಲ ಬಾರಿಗೆ ಏಕ ಸಚಿವ ಸಂಪುಟ ನಡೆಸಿ ಅನ್ನಭಾಗ್ಯ, ಕ್ಷೀರಭಾಗ್ಯ, ವಸತಿ ಭಾಗ್ಯದಂತಹ ಜನಪರ ಯೋಜನೆಗಳನ್ನು ಘೋಷಣೆ ಮಾಡಿದರು. ಮುಖ್ಯವಾಗಿ ಹಿಂದುಳಿದವರ, ಅಲ್ಪಸಂಖ್ಯಾತರ, ರೈತರ ಸಾಲ ಮನ್ನಾ ಮಾಡಿದರು. ರಾಜ್ಯದ 22ನೇ ಮುಖ್ಯಮಂತ್ರಿಯಾದ ನಂತರ ಪಂಚ ಗ್ಯಾರಂಟಿ ಯೋಜನೆಗಳಿಂದ ವಿಶ್ವದಾದ್ಯಂತ ಪ್ರಸಿದ್ಧಿಯಾದರು. ಬಡವರ ಪರ ಯೋಚಿಸುವ ಅವರೊಬ್ಬ ಮಾದರಿ ಮುಖ್ಯಮಂತ್ರಿಯಾಗಿದ್ದಾರೆ ಎಂದು ಪ್ರೊ. ಮಾರುತಿ ಮಡ್ಡಿ ಮಾತನಾಡಿ ಹೇಳಿದರು.

# ರಸ್ತೆ ನಿಯಮಗಳನ್ನು ತಪ್ಪದೇ ಪಾಲಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮನುಷ್ಯನ ಜೀವ ಅತ್ಯಮೂಲ್ಯವಾಗಿದ್ದು, ವಾಹನ ಚಲಾಯಿಸುವ ಪ್ರತಿಯೊಬ್ಬರೂ ತಪ್ಪದೇ ರಸ್ತೆ ನಿಯಮಗಳನ್ನು ಪಾಲಿಸುವ ಮೂಲಕ ರಸ್ತೆ ಅಪಘಾತ, ಸಾವು-ನೋವು ತಡೆಯುವ ನಿಟ್ಟಿನಲ್ಲಿ ಜಾಗೃತರಾಗಬೇಕು ಎಂದು ಹಿರಿಯ ಮೋಟಾರು ವಾಹನ ನಿರೀಕ್ಷಕ ಅರುಣ ಕಟ್ಟಿಮನಿ ಹೇಳಿದರು.

ಅವರು ಬುಧವಾರ ಲಕ್ಷ್ಮೇಶ್ವರದಲ್ಲಿ 37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಹೆ ಕಾರ್ಯಕ್ರಮದಲ್ಲಿ ವಾಹನ ಸವಾರರಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಮಾತನಾಡಿದರು.

ನಿಷ್ಕಾಳಜಿ ಮತ್ತು ಬೇಜವಾಬ್ದಾರಿಯಿಂದ ಅಪಘಾತಗಳು ಹೆಚ್ಚುತ್ತಿವೆ. ವಾಹನ ಚಲಾಯಿಸುವಾಗ ರಸ್ತೆ ನಿಯಮಗಳನ್ನು ಪಾಲಿಸಿ, ಏಕಚಿತ್ತದಿಂದ ವಾಹನ ಚಲಾಯಿಸಬೇಕು. ಹೆಲ್ಮೆಟ್, ಸೀಟ್‌ಬೆಲ್ಟ್ ತಪ್ಪದೇ ಧರಿಸಬೇಕು. ರಸ್ತೆ ನಿಯಮ, ಸಂಜ್ಞೆ/ಸನ್ನೆಗಳನ್ನು ಪಾಲಿಸಬೇಕು. ವಾಹನ ಚಲಾಯಿಸುವಾಗ ಮದ್ಯಪಾನ ಮಾಡಲೇಬಾರದು. ಫೋನ್, ಸೌಂಡ್ ಸಿಸ್ಟಂ ಬಳಸಬೇಡಿ, ವಾಹನದ ಹಿಂದುಗಡೆ ರೇಡಿಯಂ ಸ್ಟಿಕ್ಕರ್ ಹಚ್ಚಿ. ಅಲಂಕಾರಿಕ ವಸ್ತುಗಳನ್ನು ಬಳಸಬೇಡಿ. ಪರಿಪೂರ್ಣ ದಾಖಲಾತಿಗಳು ಇರಲಿ. ಓವರ್ ಸ್ಪೀಡ್, ಓವರ್ ಕಾನ್ಫಿಡೆನ್ಸ್ ಅಪಘಾತಕ್ಕೆ ಪ್ರಮುಖ ಕಾರಣವಾಗಿದ್ದು, ವಾಹನ ಸವಾರರು ಇದನ್ನು ಪಾಲಿಸಬೇಕು.

ರಸ್ತೆ ನಿಯಮಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಪ್ರಾದೇಶಿಕ ಸಾರಿಗೆ ಇಲಾಖೆ, ಪೊಲೀಸ್, ಶಿಕ್ಷಣ ಇತರೇ ಇಲಾಖೆಗಳ ಸಹಯೋಗದಲ್ಲಿ ಈ ತಿಂಗಳು ಶಾಲಾ-ಕಾಲೇಜು, ಸಾರ್ವಜನಿಕ ಸ್ಥಳಗಳಲ್ಲಿ ರಸ್ತೆ ಸುರಕ್ಷತಾ ನಿಯಮಗಳ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮ ಮಾಡಲಾಗುತ್ತಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಜವಾಬ್ದಾರಿ ಮತ್ತು ಸ್ವಯಂ ಪಾಲನೆ ಮಾಡಬೇಕು ಎಂದರು.

ಈ ವೇಳೆ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್‌ನ ಅಧ್ಯಕ್ಷ ಗುರುರಾಜ ಪಾಟೀಲ ಕುಲಕರ್ಣಿ, ಹಿರಿಯ




## ಸಹನಾ ಕಾರ್ಕಳರದ್ದು ದಾಖಲೆಯ ಸಾಧನೆ

▶▶ಮೊದಲನೇ ಪುಟದಿಂದ

ಎಸ್.ಕಾರ್ಕಳ, KSFC ಡೆಪ್ಯೂಟಿ ಮ್ಯಾನೇಜರ ಮಂಗಳಾ ಅನಂತ ಕಾರ್ಕಳ, ನಿವೃತ್ತ ನೌಕರರಾದ ಮಕಾನಾದರ ಮುಂತಾದವರು ಶುಭ ಹಾರೈಸಿದರು.

ಸಮಾರಂಭದಲ್ಲಿ ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ರಾಜು ಹೆಬ್ಬಳ್ಳಿ, ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ, ಅರುಣಕುಮಾರ ಹಿರೇಮಠ, ಆನಂದಯ್ಯ ವಿರಕ್ತಮಠ, ಆನಂದ ಸಾಲಿಗ್ರಾಮ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮವನ್ನು ನೌಕರರ ಸಂಘದ ಹಿರಿಯ ಉಪಾಧ್ಯಕ್ಷ ಸಂಜೀವಕುಮಾರ ಕುಂದಗೋಳ ಸ್ವಾಗತಿಸಿದರು. ಕಾರ್ಯದರ್ಶಿ ಮುತ್ತು ಮಲಕಶೆಟ್ಟಿ ನಿರೂಪಿಸಿದರು. ಕಛೇರಿ ವ್ಯವಸ್ಥಾಪಕ ಕರೀಮಸಾಬ ಸುಣಗಾರ ವಂದಿಸಿದರು.

## ಎಲ್ಲಾ ಪತ್ರಕರ್ತರ ಮಕ್ಕಳೂ ಸಾಧಕರಾಗಬೇಕು

▶▶ಮೊದಲನೇ ಪುಟದಿಂದ

ಗಣೇಶ ಪೈ, ಸಂಜೀವಕುಮಾರ ಪಾಂಡ್ರೆ, ಪತ್ರಕರ್ತರಾದ ಸಂತೋಷ ಕೊಣ್ಣೂರ, ಸುರೇಶ ಕಡ್ಲಿಮಟ್ಟಿ, ನಿಂಗನಗೌಡ್ರ, ಕ್ಯಾಮರಾಮನ್ ವಿಜಯ್ ಕಾಗನೂರಮಠ, ಮಂಜುನಾಥ ಸಾಳೇರ, ಗಣೇಶ ದೊಡ್ಡಮನಿ ಮುಂತಾದವರಿದ್ದರು.

ಕಾನಿಪ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಸ್ವಾಗತಿಸಿದರು. ಹಿರಿಯ ಪತ್ರಕರ್ತ, ಕಾನಿಪ ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯ ಆನಂದಯ್ಯ ವಿರಕ್ತಮಠ ಕಾರ್ಯಕ್ರಮ ನಿರೂಪಿಸಿದರು. ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಅರುಣಕುಮಾರ ಹಿರೇಮಠ ವಂದಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka